# ಗೃಹರಕ್ಷಕ ಹಾಗೂ ಪೌರ ರಕ್ಷಣಾ ಇಲಾಖೆಯಲ್ಲಿ ಖಾಲಿ ಇರುವ ಚಾಲಕ, ಸೈನಿಕ ಮತ್ತು ಬೋಧಕ ಹಾಗೂ ಸಹಾಯಕ ಬೋಧಕ (ಪುರುಷ ಮತ್ತು ಮಹಿಳಾ) ಹುದ್ದೆಗೆ ಅರ್ಜಿ– 2019

## ಗೃಹರಕ್ಷಕ ಹಾಗೂ ಪೌರ ರಕ್ಷಣಾ ಇಲಾಖೆಯಲ್ಲಿ ಖಾಲಿ ಇರುವ ಚಾಲಕ (ಪುರುಷ), ಸೈನಿಕ ಮತ್ತು ಬೋಧಕ ಹಾಗೂ ಸಹಾಯಕ ಬೋಧಕ ( ಪುರುಷ ಮತ್ತು ಮಹಿಳಾ ) ಹುದ್ದೆಗಳಿಗೆ ಸಂಬಂಧಿಸಿದಂತೆ ಅಭ್ಯರ್ಥಿಗಳು ಪ್ರಶ್ನಿಸಬಹುದಾದಂತಹ ಪ್ರಶ್ನೆಗಳು

1. ನಿಗದಿ ಪಡಿಸಲಾಗಿರುವ ಕನಿಷ್ಠ ವಯೋಮಿತಿ ?

ಉ: ಕರ್ನಾಟಕ ಗೃಹರಕ್ಷಕ ಮತ್ತು ಪೌರ ರಕ್ಷಣಾ ಸೇವೆಗಳು (ವೃಂದ ಮತ್ತು ನೇಮಕಾತಿ ನಿಯಮಗಳು 2010) ಪ್ರಕಾರ ಚಾಲಕ (ಪುರುಷ), ಸೈನಿಕ ಮತ್ತು ಬೋಧಕ/ಸಹಾಯಕ ಬೋಧಕ(ಪುರುಷ ಮತ್ತು ಮಹಿಳಾ) ಹುದ್ದೆಗೆ ವಯೋಮಿತಿಯು ಅರ್ಜಿಯನ್ನು ಸಲ್ಲಿಸಲು ನಿಗದಿ ಪಡಿಸಲಾಗಿರುವ ಕೊನೆಯ ದಿನಾಂಕಕ್ಕೆ ಅಂದರೆ 15.02.2019 ಕ್ಕೆ ಕನಿಷ್ಠ 21 ವರ್ಷ ತುಂಬಿರಬೇಕು.

2. ನಿಗದಿ ಪಡಿಸಲಾಗಿರುವ ಗರಿಷ್ಠ ವಯೋಮಿತಿ ?

ಉ: ಕರ್ನಾಟಕ ಗೃಹರಕ್ಷಕ ಮತ್ತು ಪೌರ ರಕ್ಷಣಾ ಸೇವೆಗಳು (ವೃಂದ ಮತ್ತು ನೇಮಕಾತಿ ನಿಯಮಗಳು 2010) ಮತ್ತು ತಿದ್ದುಪಡಿ ಪ್ರಕಾರ ಚಾಲಕ (ಪುರುಷ), ಸೈನಿಕ ಮತ್ತು ಬೋಧಕ/ಸಹಾಯಕ ಬೋಧಕ(ಪುರುಷ ಮತ್ತು ಮಹಿಳಾ) ಹುದ್ದೆಗೆ ಗರಿಷ್ಠ ವಯೋಮಿತಿಯು ಅರ್ಜಿಯನ್ನು ಸಲ್ಲಿಸಲು ನಿಗದಿ ಪಡಿಸಲಾಗಿರುವ ಕೊನೆಯ ದಿನಾಂಕಕ್ಕೆ ಅಂದರೆ 15.02.2019 ಕ್ಕೆ ಸಾಮಾನ್ಯ ವರ್ಗಕ್ಕೆ ಸೇರಿದ ಅಭ್ಯರ್ಥಿಗಳಿಗೆ ಗರಿಷ್ಠ 26 ವರ್ಷ ಹಾಗೂ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ / ಇತರೆ ಹಿಂದುಳಿದ ವರ್ಗಕ್ಕೆ ಸೇರಿದ ಅಭ್ಯರ್ಥಿಗಳಿಗೆ ಗರಿಷ್ಠ 28 ವರ್ಷ ಮೀರಿರಬಾರದು.

3. ಮಾಜಿ ಸೈನಿಕರಿಗೆ ನಿಗದಿ ಪಡಿಸಲಾಗಿರುವ ವಯೋಮಿತಿ?

ಉ: ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಸೇನೆಯಲ್ಲಿ ಸೇವೆ ಸಲ್ಲಿಸಿದ ಅವಧಿಯ ಜೊತೆಗೆ ಹೆಚ್ಚುವರಿ ಮೂರು (3) ವರ್ಷಗಳ ವಿನಾಯಿತಿಯನ್ನು ನೀಡಲಾಗುವುದು. ಬೋಧಕ ಹುದ್ದೆಗಳಿಗೆ ಮಾತ್ರ ಅನ್ವಯಿಸುತ್ತದೆ.

4. ವಿದ್ಯಾರ್ಹತೆ?

ಉ: ಅರ್ಜಿ ಸಲ್ಲಿಸಲು ನಿಗದಿ ಪಡಿಸಿರುವ ಕೊನೆಯ ದಿನಾಂಕ, ಅಂದರೆ 15.02.2019 ಕ್ಕೆ 10ನೇ ತರಗತಿ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಹೊಂದಿರಬೇಕು. ( ಚಾಲಕ ಮತ್ತು ಸೈನಿಕ ) ಪದವಿ ಅಥವಾ ತತ್ಸಮಾನ ವಿಧ್ಯಾರ್ಹತೆಯನ್ನು ಬೋಧಕ/ ಸಹಾಯಕ ಬೋಧಕ ಹೊಂದಿರತ್ತಕದ್ದು. (ಮಾಜಿ ಸೈನಿಕ ಅಭ್ಯರ್ಥಿಗಳು ವಿದ್ಯಾರ್ಹತೆಯ ಪ್ರಮಾಣ ಪತ್ರವನ್ನು ದಿನಾಂಕ 15.02.2019 ರೊಳಗೆ ಹೊಂದಿದ್ದರೆ ಅಂತಹ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ಮಾತ್ರ ಪರಿಗಣಿಸಲಾಗುವುದು).

5. ಅರ್ಜಿ ಮಾರಾಟವಾಗುತ್ತಿರುವ ಬಗ್ಗೆ ಹೇಗೆ ತಿಳಿದುಕೊಳ್ಳಬಹುದು ?

ಉ: ಅರ್ಜಿ ಮಾರಾಟ ಮಾಡಲಾಗುವುದಿಲ್ಲ. ಆಂಗ್ಲ / ಕನ್ನಡ ದಿನಪತ್ರಿಕೆಗಳಲ್ಲಿ ವ್ಯಾಪಕ ಪ್ರಚಾರವನ್ನು ನೀಡುವುದಲ್ಲದೆ ದೂರದರ್ಶನ ಮತ್ತು ಆಕಾಶವಾಣಿಗಳಲ್ಲಿ ಪ್ರಸಾರ ಮಾಡಲಾಗುವುದು. ಕಛೇರಿಯ ಅಧಿಕೃತ ವೆಬ್‌ಸೈಟ್ www.ksp.gov.in ಅಥವಾ https://www.karnataka.gov.in/hgcd/english/Pages/home.aspx ನಲ್ಲಿ ನೀಡಲಾಗುವ ಅರ್ಜಿಯನ್ನು ಭರ್ತಿ ಮಾಡಿ ಸಲ್ಲಿಸಬೇಕಾಗಿರುತ್ತದೆ.

6. ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಘಟಕವಾರು ಎಷ್ಟು ಖಾಲಿ ಹುದ್ದೆಗಳು ಲಭ್ಯವಿರುತ್ತದೆ?

ಉ:

**ಈ ಕೆಳಗೆ ನಮೂದಿಸಿರುವ ಖಾಲಿ ಹುದ್ದೆಗಳ ಸಂಖ್ಯೆ ತಾತ್ಕಾಲಿಕವಾಗಿದ್ದು, ಅವಶ್ಯಕತೆ ಹಾಗೂ ಸಂದರ್ಭಕ್ಕೆ ಅನುಗುಣವಾಗಿ ಬದಲಾವಣೆ ಮಾಡಲಾಗುವುದು.**

| | |
|---|---|
| ಚಾಲಕ (ಪುರುಷ) | 05 |
| ಸೈನಿಕ ( ಪುರುಷ ಮತ್ತು ಮಹಿಳಾ ) | 18 |
| ಬೋಧಕ (ಪುರುಷ ಮತ್ತು ಮಹಿಳಾ) | 26 |
| ಸಹಾಯಕ ಬೋಧಕ (ಪುರುಷ ಮತ್ತು ಮಹಿಳಾ) | 16 |
| **ಒಟ್ಟು** | **65** |

( ಮೇಲೆ ನಮೂದಿಸಿರುವ ಖಾಲಿ ಹುದ್ದೆಗಳ ವರ್ಗೀಕರಣಕ್ಕೆ ಅನುಬಂಧ–'ಅ' ಅನ್ನು ನೋಡಿ)

ಪೊಲೀಸ್ ಇಲಾಖೆಯ ವೆಬ್‌ಸೈಟ್ www.ksp.gov.in ಅಥವಾ https://www.karnataka.gov.in/hgcd/english/Pages/home.aspx ನಲ್ಲಿ ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸಬಹುದು.

7. ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸಲು ಎಷ್ಟು ಶುಲ್ಕವನ್ನು ಪಾವತಿಸಬೇಕು ?

ಉ: ಎಸ್.ಸಿ, ಎಸ್.ಟಿ, ಪ್ರವರ್ಗ–01 ರ ಅಭ್ಯರ್ಥಿಗಳಿಗೆ – ₹100/– ಗಳು ಮತ್ತು ಜಿಎಂ, 2ಎ, 2ಬಿ, 3ಎ, 3ಬಿ ರ ಅಭ್ಯರ್ಥಿಗಳಿಗೆ ₹250/–ಗಳನ್ನು ಪಾವತಿಸಿ ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸಬಹುದಾಗಿರುತ್ತದೆ.

8. ಭರ್ತಿ ಮಾಡಿದ ಅರ್ಜಿಗಳನ್ನು ಎಲ್ಲಿ ಸಲ್ಲಿಸಬೇಕಾಗುತ್ತದೆ?

ಉ: ಅಭ್ಯರ್ಥಿಯು ಆನ್‌ಲೈನ್ www.ksp.gov.in ಅಥವಾ https://www.karnataka.gov.in/hgcd/english/Pages/home.aspx ಮುಖಾಂತರ ಭರ್ತಿ ಮಾಡಿದ ಅರ್ಜಿಗಳನ್ನು ನಿಗದಿ ಪಡಿಸಿದ ಕೊನೆಯ ದಿನಾಂಕ ಅಂದರೆ 15.02.2019 ರ ಸಾಯಂಕಾಲ 6.00 ಗಂಟೆಯೊಳಗೆ ಸಲ್ಲಿಸಬಹುದಾಗಿರುತ್ತದೆ ಹಾಗೂ ನಂತರದ ದಿನಗಳು ಅಂದರೆ ದಿನಾಂಕ: 18.02.2019 ರಂದು ಬ್ಯಾಂಕ್‌ನಲ್ಲಿ (ಬ್ಯಾಂಕ್ ವ್ಯವಹಾರ ಸಮಯದಲ್ಲಿ) ಅಥವಾ ಅಂಚೇ ಕಛೇರಿಯಲ್ಲಿ ಹಣ ಪಾವತಿಸಲು ಕೊನೆಯ ದಿನವಾಗಿರುತ್ತದೆ.

9. ಅರ್ಜಿಗಳನ್ನು ಜೆರಾಕ್ಸ್ ಮಾಡಿ ಅಥವಾ ಅರ್ಜಿಗಳನ್ನು ಟೈಪ್ ಮಾಡಿ ಪ್ರತಿಗಳನ್ನು ಸಲ್ಲಿಸಬಹುದೇ?

ಉ: ಇಲ್ಲ. ಇಲಾಖೆಯು ನಿಗದಿ ಪಡಿಸಿರುವ ಮೂಲ ಅರ್ಜಿಯನ್ನು ಆನ್‌ಲೈನ್ ಮುಖಾಂತರ ಸಲ್ಲಿಸಬೇಕಾಗಿರುತ್ತದೆ. ಆನ್‌ಲೈನ್ ಮುಖಾಂತರ ಸಲ್ಲಿಸಿದ ಅರ್ಜಿಯನ್ನು ಮಾತ್ರ ಪರಿಗಣಿಸಲಾಗುವುದು. ಜೆರಾಕ್ಸ್ ಮಾಡಿದ ಅಥವಾ ಖುದ್ದಾಗಿ ಮತ್ತು ಅಂಚೆ ಮೂಲಕ ಸಲ್ಲಿಸುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

10. ಯಾವ ರೀತಿಯಲ್ಲಿ ಶುಲ್ಕವನ್ನು ಪಾವತಿಸಬೇಕು?

ಉ: ಆನ್‌ಲೈನ್ ಮೂಲಕ ಸೃಜಿಸಿರುವ ಬ್ಯಾಂಕ್ ಚಲನ್‌ನ್ನು ಪ್ರಿಂಟ್ ತೆಗೆದು ಪೋಸ್ಟ್ ಆಫೀಸ್ ಅಥವಾ ಹೆಚ್.ಡಿ.ಎಫ್.ಸಿ. ಬ್ಯಾಂಕ್‌ನಲ್ಲಿ ಶುಲ್ಕವನ್ನು ಪಾವತಿಸಬಹುದಾಗಿದೆ, ಬೇರಾವುದೇ ಬ್ಯಾಂಕಿನಲ್ಲಿ ಪಾವತಿಸಲು ಅವಕಾಶವಿರುವುದಿಲ್ಲ. ಬ್ಯಾಂಕ್ ಹುಂಡಿ, ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಅಥವಾ ಇನ್ನಾವುದೇ ಸ್ವರೂಪದಲ್ಲಿ ಶುಲ್ಕವನ್ನು ಪಾವತಿಸತಕ್ಕದ್ದಲ್ಲ ಹಾಗೂ ಅಂತಹ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.

10.ಎ. ಆನ್‌ಲೈನ್ ಮೂಲಕ ಸಲ್ಲಿಸಿರುವ ಅರ್ಜಿಯಲ್ಲಿನ ಅಂಶಗಳನ್ನು ಯಾವುದೇ ಹಂತದಲ್ಲಿ ಬದಲಾವಣೆ ಮಾಡಬಹುದೇ?

ಉ: ಒಮ್ಮೆ ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ನಂತರ ನೀಡಿರುವ ಮಾಹಿತಿಯನ್ನು ಯಾವುದೇ ಹಂತದಲ್ಲಿ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.

10.ಬಿ. ಒಮ್ಮೆ ಪಾವತಿಸಿದ ಶುಲ್ಕವನ್ನು ಹಿಂಪಡೆಯಬಹುದೇ?

ಉ: ಒಮ್ಮೆ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಿ, ಸೃಜಿಸಿರುವ ಚಲನ್‌ನಿಂದ ಸಂಬಂಧಪಟ್ಟ ಬ್ಯಾಂಕಿನಲ್ಲಿ ಶುಲ್ಕವನ್ನು ಪಾವತಿಸಿದ ನಂತರ ಯಾವುದೇ ಕಾರಣಗಳಿಂದ ಶುಲ್ಕವನ್ನು ಹಿಂದಿರುಗಿಸುವುದಿಲ್ಲ.

10.ಸಿ. ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದ ನಂತರ ಸಲ್ಲಿಸಿದ ಅರ್ಜಿಗಳು ಮತ್ತು ಪಾವತಿಸಿದ ಶುಲ್ಕವನ್ನು ಪರಿಗಣಿಸಲಾಗುವುದೇ?

ಉ: ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ನಿಗದಿ ಪಡಿಸಿದ ಕೊನೆಯ ದಿನಾಂಕದ ನಂತರ ಸಲ್ಲಿಸಲಾಗುವ ಅರ್ಜಿಗಳನ್ನು ಮತ್ತು ಪಾವತಿಸಿದ ಶುಲ್ಕವನ್ನು ಪರಿಗಣಿಸಲಾಗುವುದಿಲ್ಲ.

10.ಡಿ. ಮೀಸಲಾತಿ ಅಡಿಯಲ್ಲಿ ಆಯ್ಕೆ ಬಯಸುವ ಅಭ್ಯರ್ಥಿಗಳು ತಪ್ಪಾಗಿ ಪ್ರವರ್ಗವನ್ನು ತುಂಬಿರುವ ಅರ್ಜಿಗಳನ್ನು ಯಾವ ರೀತಿಯಲ್ಲಿ ಪರಿಗಣಿಸಲಾಗುವುದು?

ಉ: ಅಭ್ಯರ್ಥಿಯು ಅರ್ಜಿಯ ಪ್ರವರ್ಗದ ಅಂಕಣವನ್ನು ತಪ್ಪಾಗಿ ನಮೂದಿಸಿದ್ದಲ್ಲಿ ಅಂತಹ ಅಭ್ಯರ್ಥಿಗಳು ಸಾಮಾನ್ಯ ವರ್ಗದ ಅಡ್ಡಿಯಲ್ಲಿ ಅರ್ಹತೆ ಹೊಂದಿದಲ್ಲಿ ಅಂತಹ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ಸಾಮಾನ್ಯ ವರ್ಗದ ಅಡ್ಡಿಯಲ್ಲಿ ಪರಿಗಣಿಸಲಾಗುವುದು.

10.ಇ ಮೀಸಲಾತಿಯ ಅಡಿಯಲ್ಲಿ ಆಯ್ಕೆ ಬಯಸಿರುವ ಅಭ್ಯರ್ಥಿಗಳು ಯಾವ ಪ್ರಮಾಣ ಪತ್ರಗಳನ್ನು ಯಾವ ನಮೂನೆಯಲ್ಲಿ ಪಡೆದಿಟ್ಟುಕೊಂಡಿರಬೇಕು?

ಉ: ಮೀಸಲಾತಿಯ ಅಡಿಯಲ್ಲಿ ಆಯ್ಕೆಯನ್ನು ಬಯಸುವ ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ನಿಗದಿ ಪಡಿಸಿರುವ ಕೊನೆಯ ದಿನಾಂಕದೊಳಗೆ(15.02.2019) ಸಂಬಂಧಪಟ್ಟ ಪ್ರಾಧಿಕಾರದಿಂದ ಅಧಿಸೂಚನೆಯಲ್ಲಿ ನಮೂದಿಸಿರುವ ಸಂಬಂಧಪಟ್ಟ ಮೀಸಲಾತಿಗಳ ನಮೂನೆಯಲ್ಲಿ ಪಡೆದಿಟ್ಟುಕೊಂಡಿರತಕ್ಕದ್ದು.

10.ಎಫ್. ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವಾಗ ತಾಂತ್ರಿಕ ದೋಷ ಉಂಟಾದಲ್ಲಿ ಯಾರನ್ನು ಸಂಪರ್ಕಿಸಬೇಕು?

ಉ: ಆನ್‌ಲೈನ್ ಮೂಲಕ ಅರ್ಜಿ ಭರ್ತಿ ಮಾಡುವ ಸಂದರ್ಭದಲ್ಲಿ ತಾಂತ್ರಿಕ ಅಥವಾ ಬೇರೆ ಸಮಸ್ಯೆಗಳು ಎದುರಾದಲ್ಲಿ ನೇಮಕಾತಿ ಸಮಿತಿಯ ಸಹಾಯವಾಣಿ ಸಂಖ್ಯೆ: 080–22943346ಗೆ ಕರೆ ಮಾಡಿ ಅಗತ್ಯ ಮಾಹಿತಿಯನ್ನು ಪಡೆದು ಅರ್ಜಿ ಸಲ್ಲಿಸಬಹುದಾಗಿದೆ ಅಥವಾ ಅರ್ಜಿಯನ್ನು ಭರ್ತಿ ಮಾಡುವ ಪ್ರಕ್ರಿಯೆಯನ್ನು ಸ್ಥಗಿತಗೊಳಿಸಿ ಸ್ವಲ್ಪ ಸಮಯದ ನಂತರ ಪುನಃ ಅರ್ಜಿ ಭರ್ತಿ ಮಾಡುವ ಪ್ರಕ್ರಿಯೆಯನ್ನು ಪ್ರಾರಂಭಿಸಬಹುದು. ಆನಲೈನ್ ನಲ್ಲಿ ಭರ್ತಿ ಮಾಡಿರುವ ಮಾಹಿತಿಯು ಲಭ್ಯವಿದ್ದಲಿ ಸದರಿ ಅರ್ಜಿಯನ್ನೆ ಮುಂದುವರೆಸಬಹುದು ಅಥವಾ ಹೊಸ ಅರ್ಜಿಯನ್ನು ತೆರೆದು ಮಾಹಿತಿ ಭರ್ತಿ ಮಾಡುವ ಪ್ರಕ್ರಿಯೆಯನ್ನು ಕೈಗೊಳಬಹುದು.

11. ಚಾಲಕ, ಸೈನಿಕ ಮತ್ತು ಬೋಧಕ ಹಾಗೂ ಸಹಾಯಕ ಬೋಧಕ ಹುದ್ದೆಗೆ ಒಂದಕ್ಕಿಂತ ಹೆಚ್ಚಿನ ಅರ್ಜಿಯನ್ನು ಸಲ್ಲಿಸಬಹುದೇ?

ಉ: ಇಲ್ಲ. ಒಬ್ಬ ಅಭ್ಯರ್ಥಿಯು ಒಂದಕ್ಕಿಂತ ಹೆಚ್ಚಿನ ಅರ್ಜಿಯನ್ನು ಸಲ್ಲಿಸಬಾರದು.

12. ನಾನು ಅರ್ಹನಿರುವ ಬಗ್ಗೆ ಹೇಗೆ ತಿಳಿದುಕೊಳ್ಳುವುದು?

ಉ: ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವಾಗ ನೀವು ಅರ್ಹತೆ ಹೊಂದಿದ್ದಲ್ಲಿ ಮಾತ್ರ ಅರ್ಜಿ ಸಲ್ಲಿಸಲು ಅವಕಾಶವಿರುತ್ತದೆ. ಅನರ್ಹನಾಗಿದ್ದರೆ ಅರ್ಜಿಯನ್ನು ಸಲ್ಲಿಸಲು ಸಾಧ್ಯವಾಗುವುದಿಲ್ಲ.

13. ಲಿಖಿತ ಪರೀಕ್ಷೆಗೆ ಅರ್ಹನಾಗಲು ಹೊಂದಿರಬೇಕಾದ ಅರ್ಹತೆಗಳೇನು? ಲಿಖಿತ ಪರೀಕ್ಷೆಗೆ ತರಬೇಕಾದ ದಾಖಲೆಗಳೇನು?

ಉ: ಸಹಿಷ್ಣುತೆ ಪರೀಕ್ಷೆ ಹಾಗೂ ದೇಹದಾರ್ಢ್ಯತೆ ಪರೀಕ್ಷೆಗಳಲ್ಲಿ ಉತ್ತೀರ್ಣರಾದಲ್ಲಿ ಮಾತ್ರ ಲಿಖಿತ ಪರೀಕ್ಷೆಗೆ ಅರ್ಹತೆಯನ್ನು ಪಡೆಯುತ್ತಾರೆ ಮತ್ತು ಸದರಿ ಪರೀಕ್ಷೆಗೆ ಹಾಜರಾಗಲು 1) ಲಿಖಿತ ಪರೀಕ್ಷಯ ಕರೆಪತ್ರ. 2) ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯ ಫಲಿತಾಂಶ ಹಾಳೆ ಮತ್ತು 3) ಗುರುತಿನ ಚೀಟಿಯನ್ನು ತರತಕ್ಕದ್ದು, ತಪ್ಪಿದಲ್ಲಿ ಲಿಖಿತ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡಲಾಗುವುದಿಲ್ಲ. (ಚಾಲಕ(ಪುರುಷ) ಹುದ್ದೆಗೆ ಪರವಾನಿಗ ಪರೀಕ್ಷೆ ಇರುತ್ತದೆ.)

14. ಲಿಖಿತ ಪರೀಕ್ಷೆಯ ಪ್ರಶ್ನೆ ಪತ್ರಿಕೆಯು ಯಾವ ಭಾಷೆಯಲ್ಲಿ ಇರುತ್ತದೆ ?

ಉ: ಲಿಖಿತ ಪರೀಕ್ಷೆಯ ಪ್ರಶ್ನೆ ಪತ್ರಿಕೆಯು ಕನ್ನಡ & ಆಂಗ್ಲ ಭಾಷೆಯಲ್ಲಿ ಇರುತ್ತದೆ.

15. ಲಿಖಿತ ಪರೀಕ್ಷೆಯನ್ನು ಯಾವ ಭಾಷೆಯಲ್ಲಿ ಉತ್ತರಿಸಬಹುದು ?

ಉ: ಲಿಖಿತ ಪರೀಕ್ಷೆಯು ವಸ್ತುನಿಷ್ಠ (ಅಬ್ಜೆಕ್ಟೀವ್) ಮಾದರಿಯದಾಗಿದ್ದು, ಬಹುವಿಧ ಆಯ್ಕೆ ಉತ್ತರಗಳ ಲಿಖಿತ ಪರೀಕ್ಷೆಯಾಗಿರುವುದ್ದರಿಂದ ಅಭ್ಯರ್ಥಿಗಳು ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿ ಸರಿಯಾದ ಉತ್ತರದ ಸಂಬಂಧಪಟ್ಟ ವೃತವನ್ನು ಗುರುತಿಸಬೇಕಾಗುತ್ತದೆ.

16. ಇಲಾಖೆಯು ನಡೆಸುವ ಪರೀಕ್ಷೆಗಳಿಗೆ ಹಾಜರಾದಲ್ಲಿ ಪರೀಕ್ಷಾ ಭತ್ಯೆ ನೀಡಲಾಗುತ್ತದೆಯೇ? ಲಿಖಿತ ಪರೀಕ್ಷಾ ಕೇಂದ್ರದ ಕೊಠಡಿಯಲ್ಲಿ ಎಷ್ಟು ಸಮಯದೊಳಗೆ ಹಾಜರಿರಬೇಕು?

ಉ: ಇಲ್ಲ. ಇಲಾಖೆಯು ನಡೆಸುವ ಸಹಿಷ್ಣುತೆ & ದೇಹದಾರ್ಢ್ಯತೆ ಪರೀಕ್ಷೆ, ಲಿಖಿತ ಪರೀಕ್ಷೆ ಮತ್ತು ವೈದ್ಯಕೀಯ ಪರೀಕ್ಷೆಗಳಿಗೆ ಯಾವುದೇ ತರಹದ ಪರೀಕ್ಷಾ ಭತ್ಯೆ ನೀಡಲಾಗುವುದಿಲ್ಲ. ಅಭ್ಯರ್ಥಿಗಳು ಲಿಖಿತ ಪರೀಕ್ಷೆಗೆ ನಿಗದಿಪಡಿಸಿರುವ ಸಮಯಕ್ಕಿಂತ ಒಂದು ಗಂಟೆ ಮುಂಚಿತವಾಗಿ ಪರೀಕ್ಷಾ ಕೊಠಡಿಯಲ್ಲಿ ಹಾಜರಿತಕ್ಕದ್ದು, ಆ ಸಮಯದಲ್ಲಿ ಪರೀಕ್ಷಾ ಮೇಲ್ವಿಚಾರಕರು ಉತ್ತರ ಪತ್ರಿಕೆಯಲ್ಲಿ ಅರ್ಜಿ ಸಂಖ್ಯೆ, ನೊಂದಣಿ ಸಂಖ್ಯೆ, ಪ್ರಶ್ನೆ ಪತ್ರಿಕೆ ಶ್ರೇಣಿ ಇತ್ಯಾದಿಗಳನ್ನು ಭರ್ತಿ ಮಾಡುವ ಬಗ್ಗೆ ಕೆಲವು ಮಾರ್ಗಸೂಚನೆಗಳನ್ನು ನೀಡುವರು.

17. ಲಿಖಿತ ಪರೀಕ್ಷೆ ಕೊಠಡಿಯಲ್ಲಿ ಮೊಬೈಲ್ ಫೋನನ್ನು ಬಳಸಬಹುದೇ ?

ಉ: ಇಲ್ಲ. ಲಿಖಿತ ಪರೀಕ್ಷೆ ಕೊಠಡಿಯಲ್ಲಿ ಮೊಬೈಲ್ ಫೋನ್, ಪೇಜರ್, ಕ್ಯಾಲ್ಕುಲೇಟರ್, ಲ್ಯಾಪ್‌ಟಾಪ್ ಇತ್ಯಾದಿಗಳ ಬಳಕೆಯನ್ನು ಕಟ್ಟುನಿಟ್ಟಾಗಿ ನಿಷೇಧಿಸಿದೆ. ಒಂದು ವೇಳೆ ಉಪಯೋಗಿಸಿದ್ದಲ್ಲಿ, ಅಂತಹ ಅಭ್ಯರ್ಥಿಯ ಅಭ್ಯರ್ಥಿತನವನ್ನು ರದ್ದುಪಡಿಸುವುದಲ್ಲದೆ ಕಾನೂನಿನನ್ವಯ ಸೂಕ್ತ ಕ್ರಮ ಕೈಗೊಳ್ಳಲಾಗುವ್ವದು.

18. ಲಿಖಿತ ಪರೀಕ್ಷೆಯಲ್ಲಿ ಅನುಚಿತವಾಗಿ ವರ್ತಿಸಿದರೆ ಅಥವಾ ನಕಲು ಮಾಡಿರುವುದು ಕಂಡು ಬಂದರೆ ಯಾವ ಕ್ರಮ ಕೈಗೊಳ್ಳಲಾಗುವ್ವದು?

ಉ: ಅಭ್ಯರ್ಥಿಯು ಪರೀಕ್ಷೆಗಳಲ್ಲಿ ಅನುಚಿತವಾಗಿ ವರ್ತಿಸಿದರೆ ಅಥವಾ ನಕಲು ಮಾಡಿರುವುದು ಕಂಡು ಬಂದರೆ ಅಥವಾ ನಕಲು ಮಾಡುವ ಸಾಮಗ್ರಿಗಳನ್ನು ಹೊಂದಿದ್ದರೆ, ಅಂತಹ ಅಭ್ಯರ್ಥಿಗಳನ್ನು 3 ವರ್ಷಗಳ ಕಾಲ ಡಿಬಾರ್ ಮಾಡಲಾಗುವುದು.

## ಭೋಧಕ/ ಸಹಾಯಕ ಭೋಧಕ

19. ಭೋಧಕ/ಸಹಾಯಕ ಭೋಧಕ ಹುದ್ದೆಯ ಪ್ರಶ್ನೆ ಪತ್ರಿಕೆಗೆ ನಿಗದಿಪಡಿಸಿರುವ ಗರಿಷ್ಠ ಅಂಕಗಳೆಷ್ಟು ?

ಉ:

ಬೋಧಕ/ಸಹಾಯಕ ಬೋಧಕ ಹುದ್ದೆಗಳ ಲಿಖಿತ ಪರೀಕ್ಷೆಯು, ಪದವಿ ಗುಣಮಟ್ಟದ (ಆಜರಿಡಿಜಜ ಖಣಚಿಟಿಜಚಿಡಿಜ) ಕನ್ನಡ/ ಇಂಗ್ಲೀಷ್ ಭಾಷೆಯ 2 ಪ್ರಶ್ನೆ ಪತ್ರಿಕೆಗಳನ್ನು ಒಳಗೊಂಡಿರುತ್ತದೆ. ಪ್ರತಿ ವೃಂದದ ಹುದ್ದೆಗೂ ಬೇರೆ ಬೇರೆ ದಿನಾಂಕಗಳಂದು ಪ್ರತ್ಯೇಕವಾಗಿ ಲಿಖಿತ ಪರೀಕ್ಷೆಗಳನ್ನು ನಡೆಸಲಾಗುವುದು.

ಅ) ಪ್ರಶ್ನೆ ಪತ್ರಿಕೆ–1: ಈ ಪತ್ರಿಕೆಯಲ್ಲಿ ಎರಡು ಭಾಗಗಳಿರುತ್ತವೆ. ಮೊದಲನೇ ಭಾಗದಲ್ಲಿ ಕನ್ನಡ/ಇಂಗ್ಲೀಷ್ ಭಾಷೆಯಲ್ಲಿ 20 ಅಂಕಕ್ಕೆ ನಿಗಧಿಪಡಿಸಿದ ಪ್ರಬಂಧ ರಚನೆ ಇರುತ್ತದೆ. ಎರಡನೇ ಭಾಗದಲ್ಲಿ 20 ಅಂಕಕ್ಕೆ ಆಂಗ್ಲ ಭಾಷೆಯಿಂದ ಕನ್ನಡಕ್ಕೆ ಮತ್ತು ಕನ್ನಡ ಭಾಷೆಯಿಂದ ಆಂಗ್ಲ ಭಾಷೆಗೆ (ಪ್ಯಾಸೇಜ್) ಅನುವಾದ ಇರುತ್ತದೆ. ಪ್ರಶ್ನೆ ಪತ್ರಿಕೆ (1)ಕ್ಕೆ ಒಂದು ಗಂಟೆ ಕಾಲಾವಧಿಯನ್ನು

ನಿಗಧಿಪಡಿಸಿದ್ದು, ಈ ಪ್ರಶ್ನೆಪತ್ರಿಕೆಯು ಒಟ್ಟು 40 ಅಂಕಗಳನ್ನು ಹೊಂದಿರುತ್ತದೆ. ಕನಿಷ್ಠ ಅಂಕ ನಿಗಧಿಪಡಿಸಿರುವುದಿಲ್ಲ.

ಆ) ಪ್ರಶ್ನೆ ಪತ್ರಿಕೆ–2: ಈ ಪತ್ರಿಕೆಯು (1) ಸಾಮಾನ್ಯ ಜ್ಞಾನ ಅಧ್ಯಯನಕ್ಕೆ ಸಂಬಂಧಿಸಿದ್ದು, ಎ) ವಿಜ್ಞಾನ ಬಿ) ಭೂಗೋಳ ಸಿ) ಇತಿಹಾಸ ಡಿ) ಭಾರತೀಯ ಸಂವಿಧಾನ ಇ) ರಾಷ್ಟ್ರೀಯ ಸ್ವಾತಂತ್ರ್ಯ ಚಳುವಳಿಗಳಿಗೆ ಸಂಬಂಧಿಸಿರುತ್ತದೆ. ಹಾಗೂ (2) ಸಾಮಾನ್ಯ ಮಾನಸಿಕ ಸಾಮರ್ಥ್ಯದಡಿಯಲ್ಲಿ ಎ) ಗಣಿತ ಕೌಶಲ್ಯ ಬಿ) ಭೌಗೋಳಿಕ ಗುರುತಿಸುವಿಕೆ ಕೌಶಲ್ಯಗಳು ಸಿ) ಗ್ರಹಣ ಶಕ್ತಿ ಡಿ) ತೀರ್ಪು ಮತ್ತು ಇ) ನಿರ್ಧಾರಕ ಸಾಮರ್ಥ್ಯ. ಈ ಪತ್ರಿಕೆಯು ಬಹು ಆಯ್ಕೆಗಳುಳ್ಳ ಆಬ್ಜೆಕ್ಟೀವ್‌ಟೈಪ್ ಆಗಿದ್ದು, ಒಂದು ಗಂಟೆ ಮೂವತ್ತು ನಿಮಿಷದ ಅವಧಿಯದ್ದಾಗಿದ್ದು, 150 ಅಂಕಗಳನ್ನು ಹೊಂದಿರುತ್ತದೆ.

20. ಪ್ರಶ್ನೆ ಪತ್ರಿಕೆಯಲ್ಲಿ ಮುದ್ರಣ ದೋಷವಿದ್ದಲ್ಲಿ ಅಥವಾ ಪ್ರಶ್ನೆ ಪತ್ರಿಕೆಯ ಪ್ರಶ್ನೆಯ ಬಗ್ಗೆ ಆಕ್ಷೇಪಣೆ ಇದ್ದಲ್ಲಿ, ಅದನ್ನು ಪರೀಕ್ಷಾ ಕೊಠಡಿಯ ಮೇಲ್ವಿಚಾರಕರ ಗಮನಕ್ಕೆ ತರಬಹುದೇ?

ಉ: ಹೌದು ಪ್ರಶ್ನೆ ಪತ್ರಿಕೆಯಲ್ಲಿ ಮುದ್ರಣ ದೋಷವಿದ್ದಲ್ಲಿ ಮೇಲ್ವಿಚಾರಕರಿಗೆ ಮಾಹಿತಿ ನೀಡಿ ಸರಿಯಾದ ಪ್ರಶ್ನೆ ಪತ್ರಕೆಯನ್ನು ಪಡೆಯತಕ್ಕದ್ದು ಹಾಗೂ ಪ್ರಶ್ನೆ ಪತ್ರಿಕೆಯ ಪ್ರಶ್ನೆಯ ಬಗ್ಗೆ ಆಕ್ಷೇಪಣೆ ಇದ್ದಲ್ಲಿ ಪರೀಕ್ಷಾ ಕೇಂದ್ರವನ್ನು ಬಿಡುವ ಮೊದಲು ಆಯಾ ಪರೀಕ್ಷಾ ದಿನವೇ ಸಂಬಂಧಿತ ಮೇಲ್ವಿಚಾರಕರ ಮುಖಾಂತರ ಅವರ ಹೆಸರು, ವಿಳಾಸ, ನೋಂದಣಿ ಸಂಖ್ಯೆ, ಇತ್ಯಾದಿಗಳನ್ನು ನಮೂದಿಸಿರುವ ಲಿಖಿತ ಮನವಿಯನ್ನು ಸಲ್ಲಿಸಿ ಸ್ವೀಕೃತಿ ಪಡೆಯಬೇಕು. ಪರೀಕ್ಷಾ ಕೇಂದ್ರ ಬಿಟ್ಟ ನಂತರ ಕಳುಹಿಸುವ / ಸಲ್ಲಿಸುವ ಯಾವುದೇ ಆಕ್ಷೇಪಣೆಗಳನ್ನು ಮಾನ್ಯ ಮಾಡಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಅಧಿಸೂಚನೆಯನ್ನು ನೋಡುವುದು.

21. ಉತ್ತರ ಪತ್ರಿಕೆಯನ್ನು ಯಾರು ಮೌಲ್ಯಮಾಪನ ಮಾಡುತ್ತಾರೆ ?

ಉ: ನೇಮಕಾತಿ ಸಮಿತಿಯು ಮೌಲ್ಯಮಾಪನದ ಬಗ್ಗೆ ನಿರ್ಧಾರ ತೆಗೆದುಕೊಳ್ಳುತ್ತದೆ.
ಉತ್ತರ ಪತ್ರಿಕೆಯು ಓಎಮ್‌ಆರ್ ಕಾರ್ಬನ್‌ಲೆಸ್ ಪತ್ರಿಕೆಯಾಗಿದ್ದು, ಇದನ್ನು ಗಣಕಯಂತ್ರ ಮುಖೇನ ಸ್ಕ್ಯಾನ್ ಮಾಡಿ ಪಡೆದ ಅಂಕಗಳನ್ನು ಗಣಕ ಯಂತ್ರದಲ್ಲಿ ಶೇಖರಿಸಲಾಗುವುದು.

## ಸೈನಿಕ ಹುದ್ದೆಗೆ

ಲಿಖಿತ ಪರೀಕ್ಷೆ:(Written Examination):

ದೇಹದಾರ್ಢ್ಯತೆ ಮತ್ತು ವೈದ್ಯಕೀಯ ಪರೀಕ್ಷೆ ಹಾಗೂ ದೈಹಿಕ ಸಾಮರ್ಥ್ಯ ಪರೀಕ್ಷೆಗಳಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳನ್ನು ಮಾತ್ರ ಲಿಖಿತ ಪರೀಕ್ಷೆಗೆ ಕರೆಯಲಾಗುವುದು.

ಲಿಖಿತ ಪರೀಕ್ಷೆಯು ಕನ್ನಡ ಮತ್ತು ಇಂಗ್ಲೀಷ್ ಭಾಷೆಯಲಿದ್ದು, ಯಾವುದಾದರೂ ಒಂದು ಭಾಷೆಯಲ್ಲಿ ಪರೀಕ್ಷೆಯನ್ನು ಬರೆಯಬೇಕಾಗಿರುತ್ತದೆ. ಪ್ರಶ್ನೆ ಪತ್ರಿಕೆಯು 100 ಅಂಕಗಳನ್ನು ಹೊಂದಿದ್ದು, ಬಹುಆಯ್ಕೆಗಳುಳ್ಳ ಆಬ್ಜೆಕ್ಟೀವ್ ಟೈಪ್ ಆಗಿದ್ದು, ವಿಜ್ಞಾನ, ಭೂಗೋಳ, ಇತಿಹಾಸ, ಭಾರತದ ಸಂವಿಧಾನ, ರಾಷ್ಟ್ರೀಯ ಸ್ವಾತಂತ್ರ್ಯ ಚಳುವಳಿ ಹಾಗೂ ಸಾಮಾನ್ಯ ಮಾನಸಿಕ ಸಾಮರ್ಥ್ಯಕ್ಕೆ ಸಂಬಂಧಿಸಿರುತ್ತದೆ. ಪರೀಕ್ಷಾವಧಿಯು 1 ಗಂಟೆ 30 ನಿಮಿಷದ್ದಾಗಿರುತ್ತದೆ.

20. ಲಿಖಿತ ಪರೀಕ್ಷೆಗೆ ಕನಿಷ್ಠ ಅಂಕಗಳನ್ನು ನಿಗದಿ ಪಡಿಸಲಾಗಿದೆಯೇ?

ಉ: ಇಲ್ಲ. ಯಾವುದೇ ಕನಿಷ್ಠ ಅಂಕಗಳನ್ನು ನಿಗದಿ ಪಡಿಸಿರುವುದಿಲ್ಲ.

21. ಯಾವ ಬಣ್ಣದ ಪೆನ್ನಿನಿಂದ ಉತ್ತರ ಪತ್ರಿಕೆಯನ್ನು ಭರ್ತಿ ಮಾಡಬೇಕು ?

ಉ: ಉತ್ತರ ಪತ್ರಿಕೆಯನ್ನು ಭರ್ತಿ ಮಾಡಲು ಕಪ್ಪು ಅಥವಾ ನೀಲಿ ಬಾಲ್ ಪಾಯಿಂಟ್ ಪೆನ್ ಉಪಯೋಗಿಸುವುದು.

22. ಉತ್ತರ ಪತ್ರಿಕೆಯ ಮರುಮೌಲ್ಯಮಾಪನ ಮಾಡುವ ಅವಕಾಶವಿದೆಯೇ?

ಉ: ಇಲ್ಲ. ವೃಂದ ಮತ್ತು ನೇಮಕಾತಿ ನಿಯಮದಡಿಯಲ್ಲಿ ಉತ್ತರ ಪತ್ರಿಕೆಯ ಮರುಮೌಲ್ಯಮಾಪನ ಮಾಡಲು ಅವಕಾಶವಿರುವುದಿಲ್ಲ. ಪರೀಕ್ಷೆಯು ಸ್ಪರ್ಧಾತ್ಮಕ ಪರೀಕ್ಷೆಯಾಗಿರುವುದರಿಂದ ಮರುಮೌಲ್ಯಮಾಪನಕ್ಕೆ ಅವಕಾಶ ನೀಡಿರುವುದಿಲ್ಲ.

23. ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಕರೆಪತ್ರವನ್ನು ಹೇಗೆ ಪಡೆಯಬೇಕು?

ಉ: ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಕರೆಪತ್ರವನ್ನು ಆನ್‌ಲೈನ್ ಮುಖಾಂತರ ಪಡೆಯಬಹುದಾಗಿದೆ. ಪ್ರತ್ಯೇಕವಾಗಿ ಕರೆ ಪತ್ರವನ್ನು ಅಂಚೆ ಮುಖಾಂತರ ಕಳುಹಿಸಲಾಗುವುದಿಲ್ಲ.

24. ಸಹಿಷ್ಣುತೆ ಪರೀಕ್ಷೆ ಎಂದರೇನು ?

ಉ: ಸಹಿಷ್ಣುತೆ ಪರೀಕ್ಷೆಯಲ್ಲಿ ಈ ಕೆಳಕಂಡ ಅಂಶಗಳಿರುತ್ತವೆ. ಆಂಗ್ಲ ಭಾಷೆಯಲ್ಲಿ Endurance Test ಎಂದು ಕರೆಯಲಾಗುವುದು.

**ದೇಹಧಾರ್ಢ್ಯತೆ ಪರೀಕ್ಷೆ** (Physical Standard Test)

**ಬೋಧಕ ಹಾಗೂ ಸಹಾಯಕ ಬೋಧಕ ಹುದ್ದೆಗೆ (INSTRUCTOR AND ASSISTANT INSTRUCTOR) ಅರ್ಜಿ ಸಲ್ಲಿಸಿದ** ಅರ್ಜಿದಾರರು ಗೃಹರಕ್ಷಕ ಹಾಗೂ ಪೌರರಕ್ಷಣಾ ಇಲಾಖೆಯ (ವೃಂದ ಮತ್ತು ನೇಮಕಾತಿ) ನಿಯಮಗಳು, 2010 ಮತ್ತು 2013 ರಲ್ಲಿನ ಕ್ರಮಸಂಖ್ಯೆ 17ರ ಪುಟ ಸಂಖ್ಯೆ 7, ಮತ್ತು ಕ್ರಮ ಸಂಖ್ಯೆ 19 ರ ಪುಟ ಸಂಖ್ಯೆ 11ರ ಕಲಂ 5 ರಲ್ಲಿರುವಂತೆ ಈ ಕೆಳಕಂಡ ದೇಹದಾರ್ಢ್ಯತೆ ಹೊಂದಿರಬೇಕು.

**ಬೋಧಕ ಹಾಗೂ ಸಹಾಯಕ ಬೋಧಕ (INSTRUCTOR AND ASSISTANT INSTRUCTOR)**
**ಪುರುಷ ಹಾಗೂ ಮಾಜಿ ಸೈನಿಕ ಅಭ್ಯರ್ಥಿಗಳಿಗೆ**

| | | |
|---|---|---|
| 1 | ಎತ್ತರ | ಕನಿಷ್ಠ 170 ಸೆಂ.ಮೀ. |
| 2 | ಎದೆ ಸುತ್ತಳತೆ | ಕನಿಷ್ಠ 81 ಸೆಂ.ಮೀ ವಿಸ್ತಾರಗೊಂಡ ನಂತರ ಕನಿಷ್ಠ 5 ಸೆಂ.ಮೀ ಅಂದರೆ 86 ಸೆಂ.ಮೀ ಗೆ ಕಡಿಮೆ ಇಲ್ಲದಂತೆ. |

**ಬೋಧಕ ಹಾಗೂ ಸಹಾಯಕ ಬೋಧಕ (INSTRUCTOR & ASSISTANT INSTRUCTOR)**
**ಮಹಿಳಾ ಅಭ್ಯರ್ಥಿಗಳಿಗೆ**

| | | |
|---|---|---|
| 1 | ಎತ್ತರ | ಕನಿಷ್ಠ 157 ಸೆಂ.ಮೀ. |
| 2 | ತೂಕ | 45 ಕೆ.ಜಿ. |

ಗೃಹರಕ್ಷಕ ಹಾಗೂ ಪೌರರಕ್ಷಣಾ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳು, 2010 ರ ಕ್ರಮಸಂಖ್ಯೆ 17 ರ ಪುಟಸಂಖ್ಯೆ 7, 8 ಮತ್ತು ಕ್ರಮ ಸಂಖ್ಯೆ 19ರ ಪುಟ ಸಂಖ್ಯೆ: 11, 12 ರ ಕಾಲಂ 5 ರಲ್ಲಿ ನಿಗಧಿಪಡಿಸಿರುವ ದೈಹಿಕ ಹಾಗೂ ದೃಷ್ಟಿ ಪರೀಕ್ಷೆಗಾಗಿ ನೇಮಕಾತಿ ಸಮಿತಿಯು ರಚಿಸುವ ವೈದ್ಯಕೀಯ ಮಂಡಳಿಯ ಮುಂದೆ ಪ್ರತಿ ಹುದ್ದೆಗೂ ಪ್ರತ್ಯೇಕವಾಗಿ ಹಾಜರಾಗುವುದು.

ದೃಷ್ಟಿ (Vision) **ದೂರದೃಷ್ಟಿ** (Distant Vision)

| ಉತ್ತಮ ದೃಷ್ಟಿ (Better Eye) | | ಕೆಳಮಟ್ಟದ ದೃಷ್ಟಿ (worse Eye) |
|---|---|---|
| 6/9 | | 6/9 |
| 6/9 | of | 6/12 |

**ಸಮೀಪ ದೃಷ್ಟಿ** (Near Vision)

| ಉತ್ತಮ ದೃಷ್ಟಿ (Better Eye) | | ಕೆಳಮಟ್ಟದದೃಷ್ಟಿ (worse Eye) |
|---|---|---|
| 0/6 | of | 0/8 |

ಎರಡೂ ಕಣ್ಣುಗಳಲ್ಲಿ ಪೂರ್ತಿ ದೃಷ್ಟಿ ಇರಬೇಕು, ಕಲರ್ ಬ್ಲೈಂಡ್‌ನೆಸ್, ಮೆಳ್ಳಗಣ್ಣು ಅಥವಾ ಯಾವುದೇ ರೀತಿಯ ದೃಷ್ಟಿ ದೋಷ ಇದ್ದಲ್ಲಿ ಅವರನ್ನು ಅನರ್ಹರೆಂದು ಪರಿಗಣಿಸಲಾಗುವುದು.

10.8 ಶ್ರವಣ ಪರೀಕ್ಷೆ (Hearing Test)

1) Rinne's Test
2) Webber's Test
3) Tests for Vertigo

ಮೇಲಿನ ಯಾವುದೇ ಪರೀಕ್ಷೆಗಳಲ್ಲಿ ದೋಷ ಇದ್ದಲ್ಲಿ ಅವರನ್ನು ಅನರ್ಹರೆಂದು ಪರಿಗಣಿಸಲಾಗುವುದು.

10.9) ಈ ಕೆಳಗಿನ ದೈಹಿಕ ಪರೀಕ್ಷೆಗಳಲ್ಲಿ ಯಾವುದೇ ನ್ಯೂನತೆಗಳು ಇದ್ದಲ್ಲಿ ಅನರ್ಹತೆ ಎಂದು ಪರಿಗಣಿಸಲಾಗುವುದು.

ಅ) ತಾಗುಮಂಡಿ (knock knees)

ಆ) ಬಾಗಿದಕಾಲುಗಳು (Bow legs)

ಇ) ಚಪ್ಪಟೆಪಾದ (Flat feet)

ಈ) ಅಪಧಮನಿಊತ (varicose veins)

ಉ) ಮಾತಿನಲ್ಲಿ ಅಡಚಣೆ (Impediment in speech)

**ಟಿಪ್ಪಣಿ :**

ದೈಹಿಕ ಸಾಮರ್ಥ್ಯ ಪರೀಕ್ಷೆ ಮತ್ತು ವೈದ್ಯಕೀಯ ಪರೀಕ್ಷೆಗಳಿಗೆ ಹಾಜರಾಗುವ ಅಭ್ಯರ್ಥಿಗಳಿಗೆ ಯಾವುದೇ ಭತ್ಯೆಯನ್ನು ನೀಡಲಾಗುವುದಿಲ್ಲ ಹಾಗೂ ಅಭ್ಯರ್ಥಿಗಳು ಸ್ವಂತ ಖರ್ಚಿನಲ್ಲಿ ಹಾಜರಾಗುವುದು.

11) **ದೈಹಿಕ ಸಹನಾ ಸಾಮರ್ಥ್ಯ ಪರೀಕ್ಷೆ:(Physical Endurance Test):**

ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಅರ್ಹರಾಗುವ ಅಭ್ಯರ್ಥಿಗಳಿಗೆ ಮಾತ್ರ ಪ್ರತಿ ವೃಂದದ ಪ್ರತಿ ಹುದ್ದೆಗೂ ಪ್ರತ್ಯೇಕವಾಗಿ ಈ ಕೆಳಕಂಡ ದೈಹಿಕ ಸಹನಾ ಸಾಮರ್ಥ್ಯ ಪರೀಕ್ಷೆಯನ್ನು ನಡೆಸಲಾಗುವುದು

**ಬೋಧಕ ಹಾಗೂ ಸಹಾಯಕ ಬೋಧಕ ಹುದ್ದೆಗಳಿಗೆ: (INSTRUCTOR AND ASSISTANT INSTRUCTOR)**

| | | |
|---|---|---|
| **ಪುರುಷ ಅಭ್ಯರ್ಥಿಗಳಿಗೆ** | 2 ಕಿಲೋಮೀಟರ್ ಓಟ | ಅವಧಿ 10 ನಿಮಿಷ |
| **ಮಹಿಳಾ ಅಭ್ಯರ್ಥಿಗಳಿಗೆ** | 500 ಮೀಟರ್ ಓಟ | ಅವಧಿ 2 ನಿಮಿಷ 30 ಸೆಕೆಂಡ್ |
| **ಮಾಜಿ ಸೈನಿಕ ಅಭ್ಯರ್ಥಿಗಳಿಗೆ** | 500 ಮೀಟರ್ ಓಟ | ಅವಧಿ 2 ನಿಮಿಷ |

12) **ದೈಹಿಕ ಸಾಮರ್ಥ್ಯ ಪರೀಕ್ಷೆ:(Physical Efficiency Test) :**

ದೈಹಿಕ ಸಹನಾ ಸಾಮರ್ಥ್ಯ ಪರೀಕ್ಷೆಯಲ್ಲಿ ಅರ್ಹರಾದ ಅಭ್ಯರ್ಥಿಗಳಿಗೆ ಮಾತ್ರ ಪ್ರತಿ ವೃಂದದ ಪ್ರತಿ ಹುದ್ದೆಗೂ ಪ್ರತ್ಯೇಕವಾಗಿ ಈ ಕೆಳಕಂಡ ದೈಹಿಕ ಸಾಮರ್ಥ್ಯ ಪರೀಕ್ಷೆಯನ್ನು ನಡೆಸಲಾಗುವುದು.

**12.1) ಬೋಧಕ ಹಾಗೂ ಸಹಾಯಕ ಬೋಧಕ (INSTRUCTOR AND ASSISTANT INSTRUCTOR)**

| **ಪುರುಷ ಅಭ್ಯರ್ಥಿಗಳಿಗೆ** |
|---|

| | | |
|---|---|---|
| 1) | 100 ಮೀಟರ್ ಓಟ | 14.5 ಸೆಕೆಂಡ್‌ಗಳು |
| 2) | ಎತ್ತರ ಜಿಗಿತ | 1.25 ಮೀಟರ್‌ಗಳು |
| 3) | ಉದ್ದ ಜಿಗಿತ | 4.00 ಮೀಟರ್‌ಗಳು |
| 4) | ಗುಂಡು ಎಸೆತ (7.26 ಕೆಜಿ) | 5.80 ಮೀಟರ್‌ಗಳು |
| 5) | 800 ಮೀಟರ್ ಓಟ | 2 ನಿಮಿಷ 50 ಸೆಕೆಂಡ್‌ಗಳು |

| **ಮಾಜಿ ಸೈನಿಕ ಅಭ್ಯರ್ಥಿಗಳಿಗೆ** | | |
|---|---|---|
| 1) | 100 ಮೀಟರ್ ಓಟ | 17 ಸೆಕೆಂಡ್‌ಗಳು |
| 2) | ಎತ್ತರ ಜಿಗಿತ | 1.00 ಮೀಟರ್‌ಗಳು |
| 3) | ಉದ್ದ ಜಿಗಿತ | 3.00 ಮೀಟರ್‌ಗಳು |
| 4) | ಗುಂಡು ಎಸೆತ (4.00 ಕೆಜಿ) | 4.50 ಮೀಟರ್‌ಗಳು |
| 5) | 200 ಮೀಟರ್ ಓಟ | 35 ಸೆಕೆಂಡ್‌ಗಳು |

| **ಮಹಿಳಾ ಅಭ್ಯರ್ಥಿಗಳಿಗೆ** | | |
|---|---|---|
| 1) | 100 ಮೀಟರ್ ಓಟ | 18.5 ಸೆಕೆಂಡ್‌ಗಳು |
| 2) | ಎತ್ತರ ಜಿಗಿತ | 0.90 ಮೀಟರ್‌ಗಳು |
| 3) | ಉದ್ದ ಜಿಗಿತ | 2.50 ಮೀಟರ್‌ಗಳು |
| 4) | ಗುಂಡು ಎಸೆತ (4 ಕೆಜಿ) | 3.75 ಮೀಟರ್‌ಗಳು |
| 5) | 200 ಮೀಟರ್ ಓಟ | 40 ಸೆಕೆಂಡುಗಳು |

**12.2 ಟಿಪ್ಪಣಿ:**

1. ಬೋಧಕ ಹಾಗೂ ಸಹಾಯಕ ಬೋಧಕ ಹುದ್ದೆಗಳಿಗೆ ಪ್ರತ್ಯೇಕವಾಗಿ ದೈಹಿಕ ಸಾಮರ್ಥ್ಯ ಪರೀಕ್ಷೆ ನಡೆಸಲಾಗುವುದು. ಪ್ರತಿಯೊಂದು ವೃಂದದ, ಪ್ರತಿಯೊಂದು ಪರೀಕ್ಷೆಗೆ 5 ಅಂಕಗಳನ್ನು ನಿಗದಿಪಡಿಸಲಾಗಿದೆ. ಲಿಖಿತ ಪರೀಕ್ಷೆಗೆ ಅರ್ಹರಾಗಲು ಮೇಲಿನ 5 ದೈಹಿಕ ಸಾಮರ್ಥ್ಯ ಪರೀಕ್ಷೆಗಳ ಪೈಕಿ ಕನಿಷ್ಠ 3 ರಲ್ಲಿ ಉತ್ತೀರ್ಣರಾಗಬೇಕು. ಅದರಂತೆ 3, 4 ಹಾಗೂ 5 ದೈಹಿಕ ಸಾಮರ್ಥ್ಯ ಪರೀಕ್ಷೆಗಳಲ್ಲಿ ಉತ್ತೀರ್ಣರಾಗುವ ಅಭ್ಯರ್ಥಿಗಳಿಗೆ ಅನುಕ್ರಮವಾಗಿ 15, 20 ಹಾಗೂ 25 ಅಂಕಗಳನ್ನು ನೀಡಲಾಗುವುದು. ದೈಹಿಕ ಸಾಮರ್ಥ್ಯ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳನ್ನು, ಲಿಖಿತ ಪರೀಕ್ಷೆಯಲ್ಲಿ ಪಡೆದ ಅಂಕಗಳ ಜೊತೆ ಸೇರಿಸಿ ಪ್ರತಿ ವೃಂದದ ಹುದ್ದೆಗೂ ಪ್ರತ್ಯೇಕವಾಗಿ ಆಯ್ಕೆಯ ಮೆರಿಟ್ ಪಟ್ಟಿಯನ್ನು ತಯಾರಿಸುವಾಗ ಪರಿಗಣಿಸಲಾಗುವುದು.

2. ಅಭ್ಯರ್ಥಿಗಳು ಯಾವುದೇ 3 ದೈಹಿಕ ಸಾಮರ್ಥ್ಯ ಪರೀಕ್ಷೆಗೆ ಗೈರು ಹಾಜರಾದಲ್ಲಿ ಅವರನ್ನು ಅನರ್ಹರೆಂದು ಪರಿಗಣಿಸಲಾಗುವುದು.

3. ದೇಹದಾರ್ಢ್ಯತೆ ಹಾಗೂ ದೈಹಿಕ ಸಾಮರ್ಥ್ಯ ಪರೀಕ್ಷೆಯನ್ನು ರಾಜ್ಯದ ವಿವಿಧ ಭಾಗಗಳಲ್ಲಿ ನಡೆಸಲಾಗುವುದು.

4. ಒಂದು ವೇಳೆ ಯಾವುದೇ ತಪ್ಪು ಅಥವಾ ಸುಳ್ಳು ಮಾಹಿತಿ ನೀಡಿದಲ್ಲಿ ಅಂತಹ ಅಭ್ಯರ್ಥಿಯನ್ನು ಅನರ್ಹಗೊಳಿಸಲಾಗುವುದು / ಅಭ್ಯರ್ಥಿತನವನ್ನು ರದ್ದುಗೊಳಿಸಲಾಗವುದು.

5. ಪ್ರತಿ ವೃಂದದ ಹುದ್ದೆಯ ದೇಹದಾರ್ಢ್ಯತೆ ಹಾಗೂ ದೈಹಿಕ ಸಾಮರ್ಥ್ಯ ಪರೀಕ್ಷೆಯಲ್ಲಿ ಅರ್ಹರಾದ ಅಭ್ಯರ್ಥಿಗಳಿಗೆ ಮಾತ್ರ ಪ್ರತಿ ವೃಂದದ ಹುದ್ದೆಗೂ ಪ್ರತ್ಯೇಕವಾಗಿ ಲಿಖಿತ ಪರೀಕ್ಷೆ ನಡೆಸಲಾಗುವುದು.

6. ಅಭ್ಯರ್ಥಿಗಳಿಗೆ ದೇಹದಾರ್ಢ್ಯತೆ ಹಾಗೂ ದೈಹಿಕ ಸಾಮರ್ಥ್ಯ ಪರೀಕ್ಷೆಯ ದಿನಾಂಕ, ಸಮಯ ಮತ್ತು ಸ್ಥಳವನ್ನು ಇಲಾಖೆಯ ವೆಬ್‌ಸೈಟ್ www.karnataka.gov.in/hgcd ನಲ್ಲಿ ಪ್ರಕಟಿಸಲಾಗುವುದು.

7. ದೇಹದಾರ್ಢ್ಯತೆ ಹಾಗೂ ದೈಹಿಕ ಸಾಮರ್ಥ್ಯ ಪರೀಕ್ಷೆಯನ್ನು ನಡೆಸುವಾಗ ಅಭ್ಯರ್ಥಿಗಳಿಗೆ ಉಂಟಾಗಬಹುದಾದ ಊನ, ಪೆಟ್ಟು ಅಥವಾ ಯಾವುದೇ ರೀತಿಯ ಅಪಘಾತಗಳಿಗೆ ಇಲಾಖೆಯು ಜವಾಬ್ದಾರಿಯಾಗಿರುವುದಿಲ್ಲ.

## ಸೈನಿಕ ಹುದ್ದೆಗೆ

**ದೇಹಧಾರ್ಢ್ಯತೆ ಮತ್ತು ವೈದ್ಯಕೀಯ ಪರೀಕ್ಷೆ (Physical Standard & Medical Tests)**

ಸೈನಿಕ ಹುದ್ದೆಗೆ ಅರ್ಜಿ ಸಲ್ಲಿಸಿದ ಅರ್ಜಿದಾರರು ಗೃಹರಕ್ಷಕ ಹಾಗೂ ಪೌರರಕ್ಷಣಾ ಇಲಾಖೆಯ (ವೃಂದ ನೇಮಕಾತಿ) ನಿಯಮಗಳು, 2010 ರಲ್ಲಿನ ಕ್ರಮಸಂಖ್ಯೆ 25ರ ಪುಟ ಸಂಖ್ಯೆ 16 ಮತ್ತು 17 ರಲ್ಲಿರುವ ಕೆಳಕಂಡ ದೇಹದಾರ್ಢ್ಯತೆ ಹೊಂದಿರಬೇಕು.

**ಪುರುಷ / ಮಾಜಿ ಸೈನಿಕ ಅಭ್ಯರ್ಥಿಗಳಿಗೆ**

| | | |
|---|---|---|
| 1 | ಎತ್ತರ | ಕನಿಷ್ಠ 168 ಸೆಂ.ಮೀ. |
| 2 | ಎದೆ ಸುತ್ತಳತೆ | ಕನಿಷ್ಠ 81 ಸೆಂ.ಮೀ ವಿಸ್ತಾರಗೊಂಡ ನಂತರ ಕನಿಷ್ಠ 5 ಸೆಂ ಅಂದರೆ 86 ಸೆಂ.ಮೀ ಗೆ ಕಡಿಮೆ ಇಲ್ಲದಂತೆ. |

**ಮಹಿಳಾ ಅಭ್ಯರ್ಥಿಗಳಿಗೆ**

| | | |
|---|---|---|
| 1 | ಎತ್ತರ | ಕನಿಷ್ಠ 157 ಸೆಂ.ಮೀ. |
| 2 | ತೂಕ | 45 ಕೆ.ಜಿ. |

ಗೃಹರಕ್ಷಕ ಹಾಗೂ ಪೌರರಕ್ಷಣಾ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳು, 2010 ಕ್ರಮಸಂಖ್ಯೆ 25 ರ ಪುಟಸಂಖ್ಯೆ 16, 17 ಮತ್ತು 18 ರಲ್ಲಿ ನಿಗಧಿಪಡಿಸಿರುವ ವೈದ್ಯಕೀಯ ಪರೀಕ್ಷೆಗೆ ನೇಮಕಾತಿ ಸಮಿತಿಯು ರಚಿಸುವ ವೈದ್ಯಕೀಯ ಮಂಡಳಿಯ ಮುಂದೆ ಹಾಜರಾಗುವುದು.

ದೃಷ್ಠಿ (Vision)

**ದೂರದೃಷ್ಠಿ** (Distant Vision)

| ಉತ್ತಮ ದೃಷ್ಠಿ (Better Eye) | | ಕೆಳಮಟ್ಟದ ದೃಷ್ಠಿ (worse Eye) |
|---|---|---|
| 6/9 | | 6/9 |
| 6/9 | of | 6/12 |

**ಸಮೀಪ ದೃಷ್ಠಿ** (Near Vision)

| ಉತ್ತಮ ದೃಷ್ಠಿ (Better Eye) | | ಕೆಳಮಟ್ಟದದೃಷ್ಠಿ (worse Eye |
|---|---|---|

| | | |
|---|---|---|
| | | 0/6 \| of \| 0/8<br><br>ಎರಡೂ ಕಣ್ಣುಗಳಲ್ಲಿ ಪೂರ್ತಿ ದೃಷ್ಠಿ ಇರಬೇಕು, ಕಲರ್ ಬ್ಲೈಂಡ್‌ನೆಸ್, ಮೆಳ್ಳಗಣ್ಣು ಅಥವಾ ಯಾವುದೇ ರೀತಿಯ ದೃಷ್ಠಿ ದೋಷ ಇದ್ದಲ್ಲಿ ಅವರನ್ನು ಅನರ್ಹರೆಂದು ಪರಿಗಣಿಸಲಾಗುವುದು. |
| 10.8 | ಶ್ರವಣ ಪರೀಕ್ಷೆ (Hearing Test) | 1) Rinne's Test<br>2) Webber's Test<br>3) Tests for Vertigo<br><br>ಮೇಲಿನ ಯಾವುದೇ ಪರೀಕ್ಷೆಗಳಲ್ಲಿ ದೋಷ ಇದ್ದಲ್ಲಿ ಅವರನ್ನು ಅನರ್ಹರೆಂದು ಪರಿಗಣಿಸಲಾಗುವುದು. |

| | | |
|---|---|---|
| 10.9) | ಈ ಕೆಳಗಿನ ದೈಹಿಕ ಪರೀಕ್ಷೆಗಳಲ್ಲಿ ಯಾವುದೇ ನ್ಯೂನತೆಗಳು ಇದ್ದಲ್ಲಿ ಅನರ್ಹತೆ ಎಂದು ಪರಿಗಣಿಸಲಾಗುವುದು. | |
| | ಅ) | ತಾಗುಮಂಡಿ (knock knees) |
| | ಆ) | ಬಾಗಿದಕಾಲುಗಳು (Bow legs) |
| | ಇ) | ಚಪ್ಪಟೆಪಾದ (Flat feet) |
| | ಈ) | ಅಪಧಮನಿಊತ (varicose veins) |
| | ಉ) | ಮಾತಿನಲ್ಲಿ ಅಡಚಣೆ (Impediment in speech) |
| **ಟಿಪ್ಪಣಿ :** | | ದೈಹಿಕ ಸಾಮರ್ಥ್ಯ ಮತ್ತು ವೈದ್ಯಕೀಯ ಪರೀಕ್ಷೆಗಳಿಗೆ ಹಾಜರಾಗುವ ಅಭ್ಯರ್ಥಿಗಳಿಗೆ ಯಾವುದೇ ಭತ್ಯೆಯನ್ನುನೀಡಲಾಗುವುದಿಲ್ಲ ಹಾಗೂ ಅಭ್ಯರ್ಥಿಗಳು ಸ್ವಂತ ಖರ್ಚಿನಲ್ಲಿ ಹಾಜರಾಗುವುದು. |

| | |
|---|---|
| **11** | **ದೈಹಿಕ ಸಾಮರ್ಥ್ಯ ಪರೀಕ್ಷೆ:(Physical Efficiency Test):** |
| | ಸೈನಿಕ ಹುದ್ದೆಯ ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಅರ್ಹರಾದ ಅಭ್ಯರ್ಥಿಗಳಿಗೆ ಮಾತ್ರ ಈ ಕೆಳಕಂಡ ದೈಹಿಕ ಸಾಮರ್ಥ್ಯ ಪರೀಕ್ಷೆಯನ್ನು ನಡೆಸಲಾಗುವುದು |

| | | |
|---|---|---|
| **ಪುರುಷ ಅಭ್ಯರ್ಥಿಗಳಿಗೆ** | | |
| 1) | 100 ಮೀಟರ್ ಓಟ | 15 ಸೆಕೆಂಡ್‌ಗಳು |
| 2) | ಎತ್ತರ ಜಿಗಿತ | 1.20 ಮೀಟರ್‌ಗಳು |
| 3) | ಉದ್ದ ಜಿಗಿತ | 3.80 ಮೀಟರ್‌ಗಳು |
| 4) | ಗುಂಡು ಎಸೆತ (7.26 ಕೆಜಿ) | 5.60 ಮೀಟರ್‌ಗಳು |
| 5) | 800 ಮೀಟರ್ ಓಟ | 2 ನಿಮಿಷ 50 ಸೆಕೆಂಡ್‌ಗಳು |
| **ಮಹಿಳಾ / ಮಾಜಿ ಸೈನಿಕ ಅಭ್ಯರ್ಥಿಗಳಿಗೆ** | | |

| | | | |
|---|---|---|---|
| | 1) | 100 ಮೀಟರ್ ಓಟ | 18.5 ಸೆಕೆಂಡ್‌ಗಳು |
| | 2) | ಎತ್ತರ ಜಿಗಿತ | 0.90 ಮೀಟರ್‌ಗಳು |
| | 3) | ಉದ್ದ ಜಿಗಿತ | 2.50 ಮೀಟರ್‌ಗಳು |
| | 4) | ಗುಂಡು ಎಸೆತ (4.00 ಕೆಜಿ) | 3.75 ಮೀಟರ್‌ಗಳು |
| | 5) | 200 ಮೀಟರ್ ಓಟ | 40 ಸೆಕೆಂಡ್‌ಗಳು |

| | | |
|---|---|---|
| **11.1** | **ಟಿಪ್ಪಣಿ:** | |
| | 1) | ಅಭ್ಯರ್ಥಿಗಳು ಲಿಖಿತ ಪರೀಕ್ಷೆಗೆ ಅರ್ಹರಾಗಲು ಮೇಲಿನ 5 ದೈಹಿಕ ಸಾಮರ್ಥ್ಯ ಪರೀಕ್ಷೆಗಳ ಪೈಕಿ ಕನಿಷ್ಠ 3 ರಲ್ಲಿ ಉತ್ತೀರ್ಣರಾಗಬೇಕು. |
| | 2) | ದೇಹದಾರ್ಢ್ಯತೆ ಹಾಗೂ ದೈಹಿಕ ಸಾಮರ್ಥ್ಯ ಪರೀಕ್ಷೆಯನ್ನು ಬೆಂಗಳೂರಿನಲ್ಲಿ ನಡೆಸಲಾಗುವುದು. |
| | 3) | ಒಂದು ವೇಳೆ ಯಾವುದೇ ತಪ್ಪು ಅಥವಾ ಸುಳ್ಳು ಮಾಹಿತಿ ನೀಡಿದಲ್ಲಿ ಅಂತಹ ಅಭ್ಯರ್ಥಿಯನ್ನು ಅನರ್ಹಗೊಳಿಸಲಾಗುವುದು. |
| | 4) | ದೇಹದಾರ್ಢ್ಯತೆ ಹಾಗೂ ದೈಹಿಕ ಸಾಮರ್ಥ್ಯ ಪರೀಕ್ಷೆಯಲ್ಲಿ ಅರ್ಹರಾದ ಅಭ್ಯರ್ಥಿಗಳಿಗೆ ಮಾತ್ರ ಲಿಖಿತ ಪರೀಕ್ಷೆ ನಡೆಸಲಾಗುವುದು. |
| | 5) | ಅಭ್ಯರ್ಥಿಗಳಿಗೆ ದೇಹದಾರ್ಢ್ಯತೆ ಹಾಗೂ ದೈಹಿಕ ಸಾಮರ್ಥ್ಯ ಪರೀಕ್ಷೆಯ ದಿನಾಂಕ, ಸಮಯ ಮತ್ತು ಸ್ಥಳವನ್ನು ಇಲಾಖೆಯ ವೆಬ್‌ಸೈಟ್ www.karnataka.gov.in/hgcd ನಲ್ಲಿ ಪ್ರಕಟಿಸಲಾಗುವುದು. |
| | 6) | ದೇಹದಾರ್ಢ್ಯತೆ ಹಾಗೂ ದೈಹಿಕ ಸಾಮರ್ಥ್ಯ ಪರೀಕ್ಷೆಯನ್ನು ನಡೆಸುವಾಗ ಅಭ್ಯರ್ಥಿಗಳಿಗೆ ಉಂಟಾಗಬಹುದಾದ ಊನ, ಪೆಟ್ಟು ಅಥವಾ ಯಾವುದೇ ರೀತಿಯ ಅಪಘಾತಗಳಿಗೆ ಇಲಾಖೆಯು ಜವಾಬ್ದಾರಿಯಾಗಿರುವುದಿಲ್ಲ. |

**ಚಾಲಕ ಹುದ್ದೆಗೆ**

**ವಾಹನ ಚಾಲನಾ ಪರೀಕ್ಷೆ:**

**ಚಾಲಕ ಹುದ್ದೆಗೆ (Driver) ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ಚಾಲನಾ ಪರೀಕ್ಷೆಯನ್ನು ಬೆಂಗಳೂರಿನಲ್ಲಿನ ಯಲಹಂಕದಲ್ಲಿರುವ ಪೊಲೀಸ್ ವಾಹನ ಚಾಲನಾ ನಿರ್ವಹಣಾ ಶಾಲೆಯಲ್ಲಿ (Police Driving Maintenance School, Yealahanka, Bengaluru) ಏರ್ಪಡಿಸಲಾಗುವುದು. ಈ ಪರೀಕ್ಷೆಗೆ 100 ಅಂಕಗಳನ್ನು ನಿಗಧಿಪಡಿಸಲಾಗಿದೆ.**

25. ಭೋಧಕ/ಸಹಾಯಕ ಭೋಧಕ / ಸೈನಿಕ ಹುದ್ದೆಗೆ ನಿಗದಿ ಪಡಿಸಿರುವ ಎತ್ತರವೆಷ್ಟು ?

ಉ: ಎಲ್ಲಾ ಪುರುಷ ಅಭ್ಯರ್ಥಿಗಳಿಗೆ ಕನಿಷ್ಠ 170 ಸೆಂ.ಮೀಟರ್ ಎತ್ತರವನ್ನು ಹಾಗೂ ಎಲ್ಲಾ ಮಹಿಳಾ ಅಭ್ಯರ್ಥಿಗಳಿಗೆ ಕನಿಷ್ಠ 157 ಸೆಂ. ಮೀಟರ್ ಎತ್ತರವನ್ನು ನಿಗದಿ ಪಡಿಸಲಾಗಿದೆ.

ಸೈನಿಕ ಎಲ್ಲಾ ಪುರುಷ ಅಭ್ಯರ್ಥಿಗಿಳಿಗೆ ಕನಿಷ್ಠ 168 ಸೆಂ.ಮೀಟರ್ ಮಹಿಳಾ ಅಭ್ಯರ್ಥಿಗಳಿಗೆ ಕನಿಷ್ಠ 157 ಸೆಂ.ಮೀಟರ್ ಎತ್ತರವನ್ನು ನಿಗಧಿ ಪಡಿಸಲಾಗಿದೆ. ಚಾಲಕ ಹುದ್ದೆಗೆ ಹೊರತು ಪಡಿಸಿ.

26. ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯನ್ನು ಯಾರು ನಡೆಸುತ್ತಾರೆ?

ಉ: ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯನ್ನು ಡಿಜಿ ಮತ್ತು ಸಿಜಿಹೆಚ್‌ಜಿ ರವರಿಂದ ನಾಮನಿರ್ದೇಶಿಸಲ್ಪಟ್ಟವರ ನೇತೃತ್ವದಲ್ಲಿ ರಚಿಸಲ್ಪಟ್ಟ ಒಂದು ಸಮಿತಿಯು ನಡೆಸುತ್ತದೆ.

27. ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಅನುತ್ತೀರ್ಣರಾದವರು ಮೇಲ್ಮನವಿ ಸಲ್ಲಿಸಲು ಅವಕಾಶವಿದೆಯೇ?

ಉ: ಇಲ್ಲ. ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಅನುತ್ತೀರ್ಣರಾದ ಅಭ್ಯರ್ಥಿಗಳು ಮೇಲ್ಮನವಿ ಸಲ್ಲಿಸಲು ಅವಕಾಶವಿಲ್ಲ. ನೇಮಕಾತಿ ಸಮಿತಿಯು ನಡೆಸುವ ಪರೀಕ್ಷೆಯೇ ಅಂತಿಮವಾಗಿದ್ದು, ಇತರೆ ವೈದ್ಯಾಧಿಕಾರಿಗಳು ನೀಡುವ ಪ್ರಮಾಣ ಪತ್ರಗಳನ್ನು ಗಣನೆಗೆ ತೆಗೆದುಕೊಳ್ಳಲಾಗುವುದಿಲ್ಲ.

28. ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಅಂಕಗಳನ್ನು ನೀಡಲಾಗುತ್ತದೆಯೇ?

ಉ: ಹೌದು ಹೆಚ್ಚಿನ ಮಾಹಿತಿಗಾಗಿ ಅಧಿಸೂಚನೆಯನ್ನು ನೋಡುವುದು.

29. ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಅಭ್ಯರ್ಥಿಯು ಎರಡು ಕೇಂದ್ರಗಳಲ್ಲಿ ಭಾಗಹಿಸಬಹುದೇ?

ಉ: ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಅಭ್ಯರ್ಥಿಯು ಅರ್ಜಿ ಸಲ್ಲಿಸಿದ ಜಿಲ್ಲಾ ಪರೀಕ್ಷಾ ಕೇಂದ್ರದಲ್ಲಿ ಮಾತ್ರ ಭಾಗವಹಿಸಬಹುದಾಗಿರುತ್ತದೆ. ಆದರೆ ಅಭ್ಯರ್ಥಿಯು ಒಂದೇ ಕೇಂದ್ರದ ಬೇರೆ ಬೇರೆ ಪರೀಕ್ಷಾ ಕೇಂದ್ರದಲ್ಲಿ ಅಕ್ರಮವಾಗಿ ಭಾಗವಹಿಸುವುದು ಕಂಡುಬಂದಲ್ಲಿ ಅಂತಹವರನ್ನು ಮುಂದಿನ ನೇಮಕಾತಿ ಪ್ರಕ್ರಿಯೆಗೆ ಅನರ್ಹಗೊಳಿಸಲಾಗುವುದು.

30. ಸಹಿಷ್ಣುತೆ ಪರೀಕ್ಷೆಯನ್ನು ಯಾವ ಕ್ರಮದಲ್ಲಿಯಾದರೂ ಮಾಡಬಹುದೇ?

ಉ: ಇಲ್ಲ. ಇದನ್ನು ಇಲಾಖೆಯು ನಿಗದಿ ಪಡಿಸಿರುವ ಕ್ರಮದಲ್ಲಿಯೇ ಮಾಡಬೇಕಾಗಿರುತ್ತದೆ.

31. ದೇಹದಾರ್ಢ್ಯತೆ / ವೈದ್ಯಕೀಯ ಪರೀಕ್ಷೆಯಲ್ಲಿ ಅನುತ್ತೀರ್ಣನಾದರೆ ಇತರೆ ವೈದ್ಯರಿಂದ ಪ್ರಮಾಣ ಪತ್ರ ಪಡೆದು ನೀಡಬಹುದೇ?

ಉ: ಇಲ್ಲ. ಇತರೆ ಯಾವುದೇ ವೈದ್ಯರಿಂದ ಪಡೆದ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ. ನೇಮಕಾತಿ ಸಮಿತಿಯಿಂದ ನಿರ್ದೇಶಿಸಲ್ಪಟ್ಟಿರುವ ಅಧಿಕಾರಿಗಳು ತಪಾಸಣೆಯ ನಂತರ ನೀಡಲಾಗುವ ಪ್ರಮಾಣ ಪತ್ರವನ್ನು ಮಾತ್ರ ಪರಿಗಣಿಸಲಾಗುವುದು ಹಾಗೂ ವೈದ್ಯಕೀಯ ಮಂಡಳಿಯ ಮುಂದೆ ವೈದ್ಯಕೀಯ ಪರೀಕ್ಷೆಯನ್ನು ನಡೆಸಲಾಗುತ್ತಿದ್ದು, ವೈದ್ಯಕೀಯ ಮಂಡಳಿಯು ನೀಡುವ ಪ್ರಮಾಣ ಪತ್ರವೇ ಅಂತಿಮವಾಗಿರುತ್ತದೆ.

32. ನಿಗದಿಗೊಳಿಸಿದ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಅನುತ್ತೀರ್ಣರಾದರೆ ಲಿಖಿತ ಪರೀಕ್ಷೆಗೆ ಅರ್ಹರೇ?

ಉ: ಅಭ್ಯರ್ಥಿಯು ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಅನುತ್ತೀರ್ಣರಾದರೆ ಲಿಖಿತ ಪರೀಕ್ಷೆಗೆ ಅನರ್ಹನೆಂದು ಪರಿಗಣಿಸಲಾಗುವುದು.

33. BMI ಎಂದರೇನು ?

ಉ: BMI ಎಂದರೆ Bio Mass Index Machine ಎಂದು. ಇದರಿಂದ ದೇಹದಾರ್ಢ್ಯತೆ ಪರೀಕ್ಷೆಯ ಸಂದರ್ಭದಲ್ಲಿ ಅಭ್ಯರ್ಥಿಯ ಎತ್ತರ ಹಾಗೂ ತೂಕವನ್ನು ಅಳತೆ ಮಾಡಲಾಗುವುದು.

**ಪರೀಕ್ಷೆಗಳ ದಿನಾಂಕವನ್ನು ಇಲಾಖೆಯ ವೆಬ್‌ಸೈಟ್ http://www.ksp.gov.in ಅಥವಾ** www.karnataka.gov.in/hgcd **ನಲ್ಲಿ ಪ್ರಕಟಿಸಲಾಗುವುದು. ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯ ದಿನಾಂಕ, ಸಮಯ ಮತ್ತು ಸ್ಥಳವನ್ನು ಹೊಂದಿರುವ ಪ್ರವೇಶ/ಕರೆ ಪತ್ರಗಳನ್ನು ಇಲಾಖೆಯ ಅಂತರ್ಜಾಲದಿಂದ ಅಭ್ಯರ್ಥಿಗಳು ಕಡ್ಡಾಯವಾಗಿ ಡೌನ್ ಲೋಡ್ ಮಾಡಿಕೊಳ್ಳಬೇಕು. ಅಭ್ಯರ್ಥಿಗಳಿಗೆ ಪ್ರವೇಶ ಪತ್ರಗಳನ್ನು ಪ್ರತ್ಯೇಕವಾಗಿ**

**ರವಾನಿಸಲಾಗುವುದಿಲ್ಲ. ಪ್ರವೇಶ ಪತ್ರವಿಲ್ಲದೇ ಪರೀಕ್ಷೆಗಳಿಗೆ ಅನುವು ಮಾಡಲಾಗುವುದಿಲ್ಲ. ಈ ಸಂಬಂಧ ಅಭ್ಯರ್ಥಿಗಳು ಮುಖ್ಯವಾಗಿ ಈ ಕಛೇರಿಯ ಅಧಿಕೃತ ವೆಬ್‌ಸೈಟ್ www.ksp.gov.in ಅಥವಾ** www.karnataka.gov.in/hgcd **ನ್ನು ಮೇಲಿಂದ ಮೇಲೆ ಗಮನಿಸುತ್ತಿರುವುದು ಸೂಕ್ತ.**

a) ಅಭ್ಯರ್ಥಿಗಳಿಗೆ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗಳನ್ನು ಸಂಬಂಧಪಟ್ಟ ನೇಮಕಾತಿ ಸಮಿತಿಯ ಅಧ್ಯಕ್ಷರು ನಿಗದಿಪಡಿಸಿದ ಸ್ಥಳದಲ್ಲಿ ನಡೆಸಲಾಗುವುದು. ಆಯ್ಕೆ ಸಮಿತಿಯು ಯಾವುದೇ ಪರೀಕ್ಷಾ ಕೇಂದ್ರವನ್ನು ರದ್ದುಪಡಿಸುವ ಅಥವಾ ಹೊಸದಾಗಿ ಸೇರಿಸುವ ಹಕ್ಕನ್ನು ಕಾಯ್ದಿರಿಸಿಕೊಂಡಿರುತ್ತದೆ. ಆದ್ದರಿಂದ ಅಭ್ಯರ್ಥಿಗಳು ಇಲಾಖೆಯ ವೈಬ್‌ಸೈಟ್‌ನ್ನು ದಿನ ನಿತ್ಯ ನೋಡಲು ತಿಳಿಸಲಾಗಿದೆ.

b) ದೈಹಿಕ ಪರೀಕ್ಷೆಯು ನಡೆಯುವ ವೇಳೆ ಮತ್ತು ಸ್ಥಳವನ್ನು ಸಂಬಂಧಪಟ್ಟ ದೈಹಿಕ ಪರೀಕ್ಷೆಯ ಕೇಂದ್ರಗಳ ಸೂಚನಾ ಫಲಕದಲ್ಲಿಯೂ ಸಹ ಪ್ರಕಟಿಸಲಾಗುವುದು. ಕರೆಪತ್ರವನ್ನು ಪಡೆಯದೆ ಪರೀಕ್ಷೆಗೆ ಹಾಜರಾದಲ್ಲಿ ಅಂತಹವರಿಗೆ ದೈಹಿಕ ಪರೀಕ್ಷೆಗೆ ಅವಕಾಶ ನೀಡಲಾಗುವುದಿಲ್ಲ.
ದೈಹಿಕ ಪರೀಕ್ಷೆಗೆ ಬರುವಾಗ ಕರೆಪತ್ರದ ಜೊತೆಗೆ ಈ ಕೆಳಕಂಡ ಯಾವುದಾದರೊಂದು ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು.

i) ಪಾಸ್‌ಪೋರ್ಟ್ (Passport)
ii) ಚಾಲನಾ ಪರವಾನಗಿ ಪತ್ರ (Driving License)
iii) ಪ್ಯಾನ್ ಕಾರ್ಡ್ (PAN Card)
iv) ರಾಜ್ಯ ಸರ್ಕಾರ/ ಕೇಂದ್ರ ಸರ್ಕಾರ / ಸಾರ್ವಜನಿಕ ಸ್ವಾಮ್ಯದ ಅಥವಾ ಸರ್ಕಾರದ ಅಧೀನಕ್ಕೊಳಪಟ್ಟ ಖಾಸಗೀ ಕಂಪನಿಗಳು ವಿತರಿಸಿರುವ ಭಾವಚಿತ್ರವಿರುವ ಸೇವಾ ಗುರುತಿನ ಚೀಟಿ (Service ID Card)
v) ಸಾರ್ವಜನಿಕ ಬ್ಯಾಂಕುಗಳು / ಅಂಚೆ ಕಛೇರಿಗಳು ವಿತರಿಸಿರುವ ಭಾವಚಿತ್ರವಿರುವ ಪಾಸ್ ಪುಸ್ತಕ (Bank Pass Book with Photograph)
vi) ಭಾವಚಿತ್ರ ಸಮೇತ ನೋಂದಣಿಯಾಗಿರುವ ಸ್ವತ್ತಿನ ದಾಖಲೆಪತ್ರ ಅಥವಾ ಪಟ್ಟಾ ಪುಸ್ತಕ (Pattas and registered deeds with Photograph)
vii) ಭಾವಚಿತ್ರ ಸಮೇತ ಸಂಬಂಧಪಟ್ಟ ಪ್ರಾಧಿಕಾರಿಯವರು ವಿತರಿಸಿರುವ ಜಾತಿ ಪ್ರಮಾಣ ಪತ್ರ (Caste Certificate with Photo)
viii) ಮಾಜಿ ಸೈನಿಕ ಅಭ್ಯರ್ಥಿಗಳಿಗೆ ವಿತರಿಸಿರುವ ಪಿಂಚಣಿ ಪುಸ್ತಕ / ಪಿಂಚಣಿ ಮಂಜೂರಾತಿ ಆಗಿರುವ ಆದೇಶ (Ex-servicemen's pension book/pension payment order)
ix) ಎನ್.ಆರ್.ಇ.ಜಿ.ಎಸ್.ಯಿಂದ ನೀಡಿದ ಭಾವಚಿತ್ರವಿರುವ ಉದ್ಯೋಗ ಚೀಟಿ. (Job cards with Photograph)
x) ಎಲೆಕ್ಟೋರಲ್ ಫೋಟೋ ಗುರುತಿನ ಚೀಟಿ (EPIC).
ಭಾರತೀಯ ಗುರುತು ಪ್ರಾಧಿಕಾರದಿಂದ ನೀಡಲಾಗಿರುವ ಆಧಾರ್ ಕಾರ್ಡ್.(AADHAR CARD).

c) ಕರೆಪತ್ರದ ಜೊತೆಗೆ ಆನ್‌ಲೈನ್ ಮುಖಾಂತರ ಸಲ್ಲಿಸಿದ ಅರ್ಜಿಯ ಜೆರಾಕ್ಸ್ ಪ್ರತಿಯನ್ನು ಸಹ ತರತಕ್ಕದ್ದು, ತಪ್ಪಿದ್ದಲ್ಲಿ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡಲಾಗುವುದಿಲ್ಲ. ನಿಗದಿತ ದಿನಾಂಕ ಹಾಗೂ ಸಮಯದಲ್ಲಿ ಹಾಜರಾಗದಿದ್ದರೆ ಅಂತಹವರನ್ನು ಅನರ್ಹ ಗೊಳಿಸಲಾಗುವುದು ಹಾಗೂ ಬದಲಿ ದಿನಾಂಕವನ್ನು ನೀಡಲಾಗುವುದಿಲ್ಲ.

34. ಆಯ್ಕೆ ಪಟ್ಟಿಯನ್ನು ಹೇಗೆ ತಯಾರಿಸಲಾಗುತ್ತದೆ ?

**ಬೋಧಕ ಹಾಗೂ ಸಹಾಯಕ ಬೋಧಕ ಹುದ್ದೆಗೆ ಆಯ್ಕೆಯ ವಿಧಾನ:**

ಬೋಧಕ ಹಾಗೂ ಸಹಾಯಕ ಬೋಧಕ ಹುದ್ದೆಯ ದೈಹಿಕ ಸಾಮರ್ಥ್ಯ ಪರೀಕ್ಷೆ, ಲಿಖಿತ ಪರೀಕ್ಷೆ ಹಾಗೂ ಮೌಖಿಕ ಪರೀಕ್ಷೆಯಲ್ಲಿ

ಗಳಿಸಿದ ಅಂಕಗಳ ಆಧಾರದ ಮೇಲೆ ಆಯ್ಕೆ ಪ್ರಾಧಿಕಾರವು ಖಾಲಿ ಹುದ್ದೆಗಳ ಸಂಖ್ಯೆ ಹಾಗೂ ಕಾನೂನು ಮತ್ತು ನಿಯಮಗಳಿಗೆ ಅನುಸಾರವಾಗಿ ಒದಗಿಸಿದ ಮೀಸಲಾತಿಗನುಗುಣವಾಗಿ ಪ್ರತ್ಯೇಕವಾಗಿ ಬೋಧಕ ಹಾಗೂ ಸಹಾಯಕ ಬೋಧಕ ವೃಂದದ ಹುದ್ದೆಗಳಿಗೆ ಅಂತಿಮ ಆಯ್ಕೆ ಪಟ್ಟಿಯನ್ನು ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಲಾಗುವುದು.

**ಸ್ಯನಿಕ ಹುದ್ದೆಗ ಆಯ್ಕೆಯ ವಿಧಾನ:**

ನಿಗಧಿಪಡಿಸಿದ ವಿದ್ಯಾರ್ಹತೆ ಮತ್ತು ಲಿಖಿತ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಆಯ್ಕೆ ಪ್ರಾಧಿಕಾರವು ಖಾಲಿ ಹುದ್ದೆಗಳ ಸಂಖ್ಯೆಗೆ ಮತ್ತು  ಕಾನೂನು ಮತ್ತು ನಿಯಮಗಳಿಗೆ ಅನುಸಾರವಾಗಿ ಒದಗಿಸಿದ ಮೀಸಲಾತಿಗನುಗುಣವಾಗಿ ಅಂತಿಮ ಆಯ್ಕೆ ಪಟ್ಟಿಯನ್ನು ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಲಾಗುವುದು.
ಅಲ್ಲದೆ, ಆಯ್ಕೆ ಪ್ರಾಧಿಕಾರವು ಮೇಲಿನ ಆಯ್ಕೆ ವಿಧಾನವನ್ನೇ ಅನುಸರಿಸಿ ನೇಮಕ ಮಾಡುವ ಹುದ್ದೆಗಳಿಗೆ ಅನುಗುಣವಾಗಿ ಶೇಕಡ 10% ರಷ್ಟನ್ನು ಮೀರದಂತೆ ಹೆಚ್ಚುವರಿ ಪಟ್ಟಿಯನ್ನು ಸಹ ಸಿದ್ಧಪಡಿಸಲಾಗುವುದು. ನಂತರದಲ್ಲಿ ನೇಮಕಾತಿ ಪ್ರಾಧಿಕಾರವು ಸೂಕ್ತವಾಗಿ ಪರಿಶೀಲಿಸಿ ಅಂತಿಮ ಪಟ್ಟಿಯಲ್ಲಿನ ಜೇಷ್ಠತೆಗನುಗುಣವಾಗಿ ಖಾಲಿ ಇರುವ ಹುದ್ದೆಗಳಿಗೆ ನೇಮಕಾತಿ ಆದೇಶವನ್ನು ಹೊರಡಿಸಲಾಗುವುದು. ಮುಖ್ಯಪಟ್ಟಿಯಲ್ಲಿನ ಅಭ್ಯರ್ಥಿಗಳಿಗೆ ನೇಮಕಾತಿ ಮಾಡಿದ ನಂತರದಲ್ಲಿ ಅಥವಾ ಯಾವುದಾದರೂ ಅಭ್ಯರ್ಥಿಯು ಅನರ್ಹವೆಂದು ಕಂಡುಬಂದಲ್ಲಿ ಹೆಚ್ಚುವರಿ ಪಟ್ಟಿಯಲ್ಲಿರುವವನ್ನು ನೇಮಕ ಮಾಡಿಕೊಳ್ಳಲಾಗುವುದು.
ಪರಂತು ಹೆಚ್ಚುವರಿ ಪಟ್ಟಿಯ ನೇಮಕಾತಿಯು ಪ್ರಕಟಿಸಿದ ಖಾಲಿ ಹುದ್ದೆಗಳ ಸಂಖ್ಯೆಗೆ ಅನುಗುಣವಾಗಿರುತ್ತದೆ.

**ಚಾಲಕ ಹುದ್ದೆಗೆ ಆಯ್ಕೆಯ ವಿಧಾನ:**

ಭಾರಿ ವಾಹನ ಚಾಲನಾ ಪರೀಕ್ಷೆಯಲ್ಲಿ ಮತ್ತು ಎಸ್.ಎಸ್.ಎಲ್.ಸಿ.ಯಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಆಯ್ಕೆ ಪ್ರಾಧಿಕಾರವು ಖಾಲಿ ಹುದ್ದೆಗಳ ಸಂಖ್ಯೆ ಮತ್ತು ಕಾನೂನು ಮತ್ತು ನಿಯಮಗಳಿಗೆ ಅನುಸಾರವಾಗಿ ಒದಗಿಸಿದ ಮೀಸಲಾತಿಗನುಗುಣವಾಗಿ ಅಂತಿಮ ಆಯ್ಕೆ ಪಟ್ಟಿಯನ್ನು  ಪ್ರಕಟಿಸಲಾಗುವುದು.

ಅಲ್ಲದೆ, ಆಯ್ಕೆ ಪ್ರಾಧಿಕಾರವು ಮೇಲಿನ ಆಯ್ಕೆ ವಿಧಾನವನ್ನೇ ಅನುಸರಿಸಿ ನೇಮಕ ಮಾಡುವ ಹುದ್ದೆಗಳಿಗೆ ಅನುಗುಣವಾಗಿ ಹೆಚ್ಚುವರಿ ಪಟ್ಟಿಯನ್ನು ಸಹ ಸಿದ್ಧಪಡಿಸಲಾಗುವುದು. ನಂತರದಲ್ಲಿ ನೇಮಕಾತಿ ಪ್ರಾಧಿಕಾರವು ಸೂಕ್ತವಾಗಿ ಪರಿಶೀಲಿಸಿ ಅಂತಿಮ ಪಟ್ಟಿಯಲ್ಲಿನ ಜೇಷ್ಠತೆಗನುಗುಣವಾಗಿ ಖಾಲಿ ಇರುವ ಹುದ್ದೆಗಳಿಗೆ ನೇಮಕಾತಿ ಆದೇಶವನ್ನು ಹೊರಡಿಸಲಾಗುವುದು. ಮುಖ್ಯಪಟ್ಟಿಯಲ್ಲಿನ ಅಭ್ಯರ್ಥಿಗಳಿಗೆ ನೇಮಕಾತಿ ಮಾಡಿದ ನಂತರದಲ್ಲಿ ಅಥವಾ ಯಾವುದಾದರೂ ಅಭ್ಯರ್ಥಿಯು ಅನರ್ಹವೆಂದು ಕಂಡುಬಂದಲ್ಲಿ ಹೆಚ್ಚುವರಿ ಪಟ್ಟಿಯಲ್ಲಿರುವವರನ್ನು ನೇಮಕ ಮಾಡಿಕೊಳ್ಳಲಾಗುವುದು.

ಪರಂತು ಹೆಚ್ಚುವರಿ ಪಟ್ಟಿಯ ನೇಮಕಾತಿಯು ಪ್ರಕಟಿಸಿದ ಖಾಲಿ ಹುದ್ದೆಗಳ ಸಂಖ್ಯೆಗೆ ಅನುಗುಣವಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಅಧಿಸೂಚನೆಯನ್ನು ನೋಡತಕ್ಕದ್ದು.

35. ಮೂಲ ದಾಖಲೆ ಎಂದರೇನು ?

ಉ: ಮೂಲ ದಾಖಲೆ ಎಂದರೆ ಯಾವ ಹುದ್ದೆಗೆ ಸೇರಲು ಬಯಸುತ್ತಾರೋ ಆ ಹುದ್ದೆಗೆ ನಿಗದಿ ಪಡಿಸಿದ ವಿದ್ಯಾರ್ಹತೆಯ ಅಂಕಪಟ್ಟಿ, ಹುಟ್ಟಿದ ದಿನಾಂಕದ ದಾಖಲೆ ಹಾಗೂ ಮೀಸಲಾತಿಗಳನ್ನು ಕೋರಿದ್ದಲ್ಲಿ ಅಂತಹ ಪ್ರಮಾಣ ಪತ್ರದ ಮೂಲ ಪ್ರತಿಗಳು.

36. ಮೂಲ ದಾಖಲೆಗಳನ್ನು ಯಾವಾಗ ಹಾಜರುಪಡಿಸಬೇಕು ?

ಉ: ನೇಮಕಾತಿ ಪ್ರಾಧಿಕಾರವು ಯಾವ ಹಂತದಲ್ಲಿಯಾದರೂ ಹಾಜರುಪಡಿಸಲು ಸೂಚಿಸಬಹುದು. ಅಭ್ಯರ್ಥಿಯು ಅರ್ಜಿಗಳನ್ನು ಸಲ್ಲಿಸಲು ನಿಗದಿ ಪಡಿಸಿರುವ ಕೊನೆಯ ದಿನಾಂಕದೊಳಗೆ ಅಂದರೆ 15.02.2019 ರೊಳಗೆ ಸಿಂಧುವಾಗಿರುವಂತೆ ಮೂಲ ದಾಖಲೆಗಳನ್ನು ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಹಾಜರುಪಡಿಸಲು ಸೂಚಿಸಿದಾಗ ಹಾಜರುಪಡಿಸತಕ್ಕದ್ದು.

37. ಮೂಲ ತರಬೇತಿ ಎಷ್ಟು ತಿಂಗಳಿರುತ್ತವೆ ?

ಉ: ನೇಮಕಾತಿ ಹೊಂದಿದ ಅಭ್ಯರ್ಥಿಗಳು ಗೃಹ ರಕ್ಷಕ ಮತ್ತು ಪೌರರಕ್ಷಣ ಇಲಾಖೆಯು ತೀರ್ಮಾನಿಸಿದ ಅವಧಿಗೆ ತರಬೇತಿಯನ್ನು ನೀಡಲಾಗುವುದು. ಕೊನೆಯಲ್ಲಿ ನಿಗದಿ ಪಡಿಸಿದ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಬೇಕು. (ಹೆಚ್ಚಿನ ಮಾಹಿತಿಗಾಗಿ ನೇಮಕಾತಿ ಅಧಿಸೂಚನೆಯನ್ನು ನೋಡುವುದು).

38. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, 2ಎ, 2ಬಿ, 3ಎ ಮತ್ತು 3ಬಿ ಅಭ್ಯರ್ಥಿಗಳು ಯಾವ ಜಾತಿ ಪ್ರಮಾಣ ಪತ್ರದ ಫಾರಂನ್ನು ಹಾಜರುಪಡಿಸಬೇಕು ?

ಉ: ಜಾತಿ ಮೀಸಲಾತಿ ಕೋರ ಬಯಸುವ ಅಭ್ಯರ್ಥಿಗಳು ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ಸಹಿ ಮತ್ತು ಮೇಲು ರುಜು ಮಾಡಿಸಿ ಮತ್ತು ಮೊಹರಿನೊಂದಿಗೆ ಈ ಕೆಳಕಂಡ ನಮೂನೆಗಳಲ್ಲಿ ಪ್ರಮಾಣ ಪತ್ರಗಳನ್ನು ಹಾಜರುಪಡಿಸಬೇಕು.

ಎ) ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ : ನಮೂನೆ–ಡಿ

ಬಿ) ಪ್ರವರ್ಗ – 1 : ನಮೂನೆ–ಇ

ಸಿ) ಪ್ರವರ್ಗ– 2ಎ, 2ಬಿ, 3ಎ, 3ಬಿ : ನಮೂನೆ – ಎಫ್

ಇವುಗಳ ನಮೂನೆಯನ್ನು ಅಧಿಸೂಚನೆಯಲ್ಲಿ ಮಾಹಿತಿಗಾಗಿ ನೀಡಲಾಗಿದೆ.

39. ನೇಮಕಾತಿಯಲ್ಲಿ ವಿವಿಧ ಜಾತಿ ಮತ್ತು ವರ್ಗಗಳಿಗೆ ಎಷ್ಟು ಮೀಸಲಾತಿಯನ್ನು ನೀಡಲಾಗುತ್ತದೆ ?

ಉ:

| | | |
|---|---|---|
| ಸಾಮಾನ್ಯ ವರ್ಗ | – | 50% |
| ಪರಿಶಿಷ್ಟ ಜಾತಿ | – | 15% |
| ಪರಿಶಿಷ್ಟ ಪಂಗಡ | – | 03% |
| ಪ್ರವರ್ಗ– 1 | – | 04% |
| ಪ್ರವರ್ಗ– 2ಎ | – | 15% |
| ಪ್ರವರ್ಗ– 2ಬಿ | – | 04% |
| ಪ್ರವರ್ಗ– 3ಎ | – | 04% |
| ಪ್ರವರ್ಗ– 3ಬಿ | – | 05% |

(ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ/08/ಸೆಹಿಮ/95, ದಿನಾಂಕ: 20.06.1995 ರಲ್ಲಿರುವಂತೆ)

40. ಗ್ರಾಮೀಣ ಅಭ್ಯರ್ಥಿ ಎಂದರೇನು ? ಪ್ರಮಾಣ ಪತ್ರವನ್ನು ಯಾರಿಂದ ಮತ್ತು ಎಂದು ಪಡೆದಿರಬೇಕು?

ಉ: 1ನೇ ತರಗತಿಯಿಂದ 10ನೇ ತರಗತಿಯವರೆಗೆ ನಿರಂತರವಾಗಿ ಗ್ರಾಮೀಣ ಪ್ರದೇಶದಲ್ಲಿ ವ್ಯಾಸಂಗ ಮಾಡಿರುವ ಅಭ್ಯರ್ಥಿಗಳಿಗೆ ಗ್ರಾಮೀಣ ಅಭ್ಯರ್ಥಿ ಎನ್ನುತ್ತಾರೆ. ಗ್ರಾಮೀಣ ಮೀಸಲಾತಿ ಪ್ರಮಾಣಪತ್ರವನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಮಾಡಿಸಿರಬೇಕು ಹಾಗು ಅರ್ಜಿಯನ್ನು ಸಲ್ಲಿಸಲು ನಿಗದಿ ಪಡಿಸಿರುವ ಕೊನೆಯ ದಿನಾಂಕದ ಒಳಗೆ ಮೀಸಲಾತಿ ಪ್ರಮಾಣ ಪತ್ರವನ್ನು ಪಡೆದಿರತಕ್ಕದ್ದು.

41. ಕನ್ನಡ ಮಾಧ್ಯಮ ಅಭ್ಯರ್ಥಿ ಎಂದರೇನು ? ಪ್ರಮಾಣ ಪತ್ರವನ್ನು ಯಾರಿಂದ ಮತ್ತು ಎಂದು ಪಡೆದಿರಬೇಕು?

ಉ: 1ನೇ ತರಗತಿಯಿಂದ 10ನೇ ತರಗತಿಯವರೆಗೆ ನಿರಂತರವಾಗಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಅಭ್ಯರ್ಥಿಗಳಿಗೆ ಕನ್ನಡ ಮಾಧ್ಯಮ ಅಭ್ಯರ್ಥಿ ಎನ್ನುತ್ತಾರೆ. ಕನ್ನಡ ಮಾಧ್ಯಮ ಮೀಸಲಾತಿ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಮಾಡಿಸಿರಬೇಕು ಹಾಗು ಅರ್ಜಿಯನ್ನು ಸಲ್ಲಿಸಲು ನಿಗದಿ ಪಡಿಸಿರುವ ಕೊನೆಯ ದಿನಾಂಕದ ಒಳಗೆ ಮೀಸಲಾತಿ ಪ್ರಮಾಣ ಪತ್ರವನ್ನು ಪಡೆದಿರತಕ್ಕದ್ದು.

42. ಮಾಜಿ ಸೈನಿಕ ಅಭ್ಯರ್ಥಿ ಎಂದರೇನು ?

ಉ: ಭೂಸೇನೆ, ವಾಯು ಸೇನೆ, ನೌಕಾ ಸೇನೆಯಲ್ಲಿ ಸೇವೆ ಸಲ್ಲಿಸಿ ಸೈನ್ಯ ವಿಯೋಜನೆ, ಸೇವೆಯಿಂದ ತೆಗೆದುಹಾಕಿದ ಹಾಗೂ ಸೇವಾ ನಿವೃತ್ತಿ ಹೊಂದಿರುವ ಯೋಧರನ್ನು ಮಾಜಿ ಸೈನಿಕ ಅಭ್ಯರ್ಥಿ ಎನ್ನುತ್ತಾರೆ.

43. ಯೋಜನಾ ನಿರಾಶ್ರಿತ ಅಭ್ಯರ್ಥಿ ಎಂದರೇನು ? ಪ್ರಮಾಣ ಪತ್ರವನ್ನು ಯಾರಿಂದ ಮತ್ತು ಎಂದು ಪಡೆದಿರಬೇಕು?

ಉ: ಸರ್ಕಾರದ ಯೋಜನೆಗಳಿಂದ ತಾವು ಅವಲಂಬಿತರಾಗಿದ್ದ ಕೃಷಿ ಭೂಮಿ, ಮನೆಗಳನ್ನು ಕಳೆದುಕೊಂಡ ಅಭ್ಯರ್ಥಿಗಳನ್ನು ಯೋಜನಾ ನಿರಾಶ್ರಿತ ಅಭ್ಯರ್ಥಿ ಎನ್ನುತ್ತಾರೆ. ಪ್ರಮಾಣ ಪತ್ರವನ್ನು ನಿಗದಿ ಪಡಿಸಿರುವ ನಮೂನೆಯಲ್ಲಿ ಸಂಬಂಧಪಟ್ಟ ತಹಶೀಲ್ದಾರ್‌ರವರಿಂದ ಪಡೆದು ಅರ್ಜಿ ಸಲ್ಲಿಸಲು ನಿಗದಿ ಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು.

44. ಗ್ರಾಮೀಣ ಅಭ್ಯರ್ಥಿಗಳಿಗೆ ಶೇಕಡ ಎಷ್ಟು ಮೀಸಲಾತಿ ನೀಡಲಾಗಿದೆ ?

ಉ: ಗ್ರಾಮೀಣ ಅಭ್ಯರ್ಥಿಗಳಿಗೆ 5% ಮೀಸಲಾತಿ ನೀಡಲಾಗಿದೆ. (ಸರ್ಕಾರದ ಆದೇಶ ಸಂಖ್ಯೆ .ಸಿಆಸುಇ/53/ಸೆನೆನಿ/2007, ದಿನಾಂಕ: 04.01.2008ರ ಪ್ರಕಾರ)

45. ಕನ್ನಡ ಮಾಧ್ಯಮ ಅಭ್ಯರ್ಥಿಗಳಿಗೆ ಶೇಕಡ ಎಷ್ಟು ಮೀಸಲಾತಿ ನೀಡಲಾಗಿದೆ ?

ಉ: ಕನ್ನಡ ಮಾಧ್ಯಮ ಅಭ್ಯರ್ಥಿಗಳಿಗೆ 5% ಮೀಸಲಾತಿ ನೀಡಲಾಗಿದೆ. (ಸರ್ಕಾರದ ಆದೇಶ ಸಂಖ್ಯೆ.ಸಿಆಸುಇ/53/ಸೆನೆನಿ/2007, ದಿನಾಂಕ: 04.01.2008ರ ಪ್ರಕಾರ)

46. ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿಗಳಿಗೆ ಶೇಕಡ ಎಷ್ಟು ಮೀಸಲಾತಿ ನೀಡಲಾಗಿದೆ ?

ಉ: ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿಗಳಿಗೆ 5% ಮೀಸಲಾತಿ ನೀಡಲಾಗಿದೆ. (ಸರ್ಕಾರದ ಆದೇಶ ಸಂಖ್ಯೆ.ಸಿಆಸುಇ/53/ಸೆನೆನಿ/2007, ದಿನಾಂಕ: 04.01.2008ರ ಪ್ರಕಾರ)

47. ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಶೇಕಡ ಎಷ್ಟು ಮೀಸಲಾತಿ ನೀಡಲಾಗಿದೆ ?

ಉ: ಮಾಜಿ ಸೈನಿಕ ಅಭ್ಯರ್ಥಿಗಳಿಗೆ 10% ಮೀಸಲಾತಿ ನೀಡಲಾಗಿದೆ. (ಸರ್ಕಾರದ ಆದೇಶ ಸಂಖ್ಯೆ. ಸಿಆಸುಇ/53/ಸೆನೆನಿ/2007, ದಿನಾಂಕ: 04.01.2008ರ ಪ್ರಕಾರ)

48. ಮಾಜಿ ಸೈನಿಕ ಅಭ್ಯರ್ಥಿಗಳು ಯಾವ ಪ್ರಮಾಣ ಪತ್ರಗಳನ್ನು ಸಲ್ಲಿಸಬೇಕಾಗುತ್ತದೆ ?

ಉ: ಮಾಜಿ ಸೈನಿಕ ಅಭ್ಯರ್ಥಿಗಳು ವಿದ್ಯಾರ್ಹತೆಗೆ ಸಂಬಂಧಿಸಿದಂತೆ ಪ್ರಮಾಣ ಪತ್ರದ ಜೊತೆಗೆ ಸೈನಿಕ ಸೇವೆಯಿಂದ ಬಿಡುಗಡೆಯಾದ / ಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ / ನಿರಾಕ್ಷೇಪಣಾ ಪ್ರಮಾಣ ಪತ್ರ ಮತ್ತು ಜಾತಿ ಮೀಸಲಾತಿ ಕೋರಿದ್ದಲ್ಲಿ ಜಾತಿ ಪ್ರಮಾಣ ಪತ್ರ ಸಲ್ಲಿಸಬೇಕಾಗುತ್ತದೆ.

49. ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಸೈನ್ಯದಿಂದ ವಿಯೋಜನೆ ಹೊಂದುವಾಗ ನೀಡುವ ಗ್ರಾಜ್ಯುಯೇಟ್ ಪ್ರಮಾಣ ಪತ್ರ ಹೊಂದಿದ್ದರೆ ಅರ್ಜಿ ಸಲ್ಲಿಸಬಹುದೇ?

ಉ: ಮಾಜಿ ಸೈನಿಕನು ಎಸ್.ಎಸ್.ಎಲ್.ಸಿ ಉತ್ತೀರ್ಣ ಹೊಂದಿ, ಸೈನಿಕನಾಗಿ ಭರ್ತಿ ಹೊಂದಿ, ತದ ನಂತರ ಸೈನ್ಯದಿಂದ ವಿಯೋಜನೆ ಹೊಂದುವಾಗ, ಸೈನ್ಯದಿಂದ ಮಾಜಿ ಸೈನಿಕನಿಗೆ ನೀಡುವ ಗ್ರಾಜ್ಯುಯೇಷನ್ ಸರ್ಟಿಫಿಕೇಟ್ ಹೊಂದಿರುವ ಮಾಜಿಸೈನಿಕ ಅಭ್ಯರ್ಥಿಗಳು ಸದರಿ ಹುದ್ದೆಗೆ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ.

50. ಮಾಜಿ ಸೈನಿಕ ಅಭ್ಯರ್ಥಿಗಳು ಯಾವಾಗ ಅರ್ಜಿಯನ್ನು ಸಲ್ಲಿಸಬಹುದಾಗಿದೆ?

ಉ: ಕೇಂದ್ರ ಸಶಸ್ತ್ರದಳದ ಸೇವೆಯಲ್ಲಿ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಅಥವಾ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಿದ್ದಲ್ಲಿ, ಅಂತಹ ಮಾಜಿ ಸೈನಿಕ ಅಭ್ಯರ್ಥಿಗಳು ನೇಮಕಾತಿ ಮಾಡಲಾಗುವ ಹುದ್ದೆಗಳಿಗೆ ಮಾಜಿ ಸೈನಿಕ ಮೀಸಲಾತಿ ಅಥವಾ ಮಾಜಿ ಸೈನಿಕರಿಗೆ ಹುದ್ದೆಗಳನ್ನು ಕಲ್ಪಿಸಿದ್ದಲ್ಲಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

51. ಮಾಜಿ ಸೈನಿಕ ಮಕ್ಕಳು ಸಹ ಮಾಜಿ ಸೈನಿಕ ಮೀಸಲಾತಿ ಕೋರಿ ಅರ್ಜಿಯನ್ನು ಸಲ್ಲಿಸಬಹುದೇ?

ಉ: ಸೇನೆಯಲ್ಲಿ ಸೇವೆ ನಿರ್ವಹಿಸುವ ಸಂದರ್ಭದಲ್ಲಿ ಮರಣ ಅಥವಾ ಶಾಶ್ವತ ವಿಕಲತೆ ಹೊಂದಿದ ಮಾಜಿ ಸೈನಿಕರ ಮಕ್ಕಳು ಅರ್ಜಿಯನ್ನು ಸಲ್ಲಿಸಬಹುದಾಗಿದೆ.

52. ಮಾಜಿ ಸೈನಿಕ ಮಕ್ಕಳಿಗೆ ಶೇಕಡ ಮೀಸಲಾತಿ ಎಷ್ಟು ಪರಿಗಣಿಸಲಾಗುವುದು ?

ಉ: ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಮೀಸಲಿರುವ ಶೇಕಡ 10 ರೊಳಗೆ ಮಾಜಿ ಸೈನಿಕ ಮಕ್ಕಳನ್ನು ಸಹ ಪರಿಗಣಿಸಲಾಗುವುದು. (ಸರ್ಕಾರದ ಆದೇಶ ಸಂಖ್ಯೆ.ಸಿಆಸುಇ/53/ಸೆನೆನಿ/2007, ದಿನಾಂಕ: 04.01.2008ರ ಪ್ರಕಾರ)

53. ಮಾಜಿ ಸೈನಿಕರ ಮಕ್ಕಳಿಗೆ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ವಿನಾಯಿತಿ ನೀಡಲಾಗಿದೆಯೇ?

ಉ: ಮಾಜಿ ಸೈನಿಕರ ಮಕ್ಕಳಿಗೆ ಸಹಿಷ್ಣುತೆ ಮತ್ತು ದೇಹದಾಢ್ಯತೆ ಪರೀಕ್ಷೆಯಲ್ಲಿ ವಿನಾಯಿತಿ ಇರುವುದಿಲ್ಲ ಮತ್ತು ಸಾಮಾನ್ಯ ಅಭ್ಯರ್ಥಿಗಳಿಗೆ ಇರುವ ಅರ್ಹತೆಯ ಮಟ್ಟವನ್ನು ಪೂರ್ಣಗೊಳಿಸಬೇಕಾಗುತ್ತದೆ.

54. ಅಭ್ಯರ್ಥಿಗಳಿಗೆ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಮತ್ತು ಲಿಖಿತ ಪರೀಕ್ಷಗೆ ಕರೆ ಪತ್ರಗಳನ್ನು ಅಂಚೆ ಮುಖಾಂತರ ಕಳುಹಿಸಲಾಗುವುದೇ?

ಉ: ಚಾಲಕ (ಹೊರತು ಪಡಿಸಿ), ಸೈನಿಕ ಮತ್ತು ಬೋಧಕ ಹಾಗೂ ಸಹಾಯಕ ಬೋಧಕ ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸುವಂತಹ ಅಭ್ಯರ್ಥಿಗಳಿಗೆ ಸಹಿಷ್ಣುತೆ & ದೇಹದಾರ್ಢ್ಯತೆ ಪರೀಕ್ಷೆಗೆ ಮತ್ತು ಲಿಖಿತ ಪರೀಕ್ಷೆಗೆ ಕರೆ ಪತ್ರಗಳನ್ನು ಅಂಚೆಯ ಮುಖಾಂತರ ಕಳುಹಿಸಲಾಗುವುದಿಲ್ಲ. ಪರೀಕ್ಷೆಯ ಕರೆ ಪತ್ರಗಳು ಆನ್‌ಲೈನ್‌ನಲ್ಲಿ ಲಭ್ಯವಿರುವುದು ಮತ್ತು ಅಭ್ಯರ್ಥಿ ಸ್ವತಹ ಆನ್‌ಲೈನ್‌ನಿಂದ ಕರೆ ಪತ್ರಗಳನ್ನು ಡೌನ್‌ಲೋಡ್ ಮಾಡಿ ಮುದ್ರಿಸಿಕೊಂಡು ಪರೀಕ್ಷಗೆ ಕರೆಪತ್ರದೊಂದಿಗೆ ಹಾಜರಾಗತಕ್ಕದ್ದು.

55. ಕರೆಪತ್ರಗಳನ್ನು ತರದೆ ಪರೀಕ್ಷೆಗೆ ಹಾಜರಾಗಬಹುದೇ?

ಉ: ಆನ್‌ಲೈನ್‌ನಲ್ಲಿ ಲಭ್ಯವಿರುವ ಕರೆಪತ್ರಗಳನ್ನು ತರದೆ ಇರುವ ಯಾವುದೇ ಅಭ್ಯರ್ಥಿಯನ್ನು ಪರೀಕ್ಷೆಗೆ ಹಾಜರಾಗಲು ಪರಿಗಣಿಸಲಾಗುವುದಿಲ್ಲ. ಸಹಿಷ್ಣುತೆ & ದೇಹದಾರ್ಢ್ಯತೆ ಪರೀಕ್ಷೆಗೆ ಹಾಜರಾಗುವ, ಆನ್‌ಲೈನ್ ಮುಂಖಾತರ ಅರ್ಜಿ ಸಲ್ಲಿಸಿದ ಅಭ್ಯಥಿಗಳು ಮುದ್ರಿತ ಅರ್ಜಿ ಪ್ರತಿಯೊಂದಿಗೆ ಬ್ಯಾಂಕ್‌ಗೆ ಶುಲ್ಕ ಪಾವತಿಸಿದ ಮೂಲ ಚಲನ್‌ನ ಅಭ್ಯರ್ಥಿ ಪ್ರತಿಯನ್ನು ತಪ್ಪದೆ ಹಾಜರುಪಡಿಸತಕ್ಕದ್ದು.

56. ಸಹಿಷ್ಣುತೆ & ದೇಹದಾರ್ಢ್ಯತೆ ಪರೀಕ್ಷೆ ಮತ್ತು ಲಿಖಿತ ಪರೀಕ್ಷೆಗೆ ಅರ್ಹನಾಗಿರುವ ಬಗ್ಗೆ ಮಾಹಿತಿ ಎಲ್ಲಿ ಲಭ್ಯವಾಗುತ್ತದೆ?

ಉ: ಪ್ರತಿ ಪರೀಕ್ಷೆಯ ಫಲಿತಾಂಶ ಮತ್ತು ಅಭ್ಯರ್ಥಿಯು ಅರ್ಹತೆ ಹೊಂದಿರುವ ಮಾಹಿತಿಯನ್ನು ಅಧಿಕೃತ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು.

57. ಎಂತಹ ಅಭ್ಯರ್ಥಿಗಳ ವಿರುದ್ಧ ಶಿಸ್ತಿನ ಕ್ರಮ ಕೈಗೊಳ್ಳಬಹುದಾಗಿದೆ?

ಉ: ತಪ್ಪು ಮಾಹಿತಿಯನ್ನು ಆನ್‌ಲೈನ್‌ನಲ್ಲಿ ತುಂಬಿ ಪರೀಕ್ಷೆಯಲ್ಲಿ ಭಾಗವಹಿಸುವ ಅಭ್ಯರ್ಥಿಗಳು ಪರೀಕ್ಷೆಯ ಮುಂಚಿತವಾಗಿ ಮತ್ತು ಪರೀಕ್ಷೆಯ ನಂತರ ಕಂಡು ಬಂದಲ್ಲಿ, ದುರ್ನಡತೆ, ಅನೂಚಿತವಾಗಿ ವರ್ತನೆ,

ಲಿಖಿತ ಪರೀಕ್ಷೆಯ ಸಂದರ್ಭದಲ್ಲಿ ನಕಲು ಮಾಡುವುದು ಕಂಡು ಬಂದಲ್ಲಿ ಕಾನೂನು ರೀತ್ಯಾ ಸೂಕ್ತ ಕ್ರಮವನ್ನು ಕೈಗೊಳ್ಳಲಾಗುವುದು.

58. ಆನ್-ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ವೆಬ್-ಸೈಟ್ ಯಾವುದು ?

ಉ: ಆನ್-ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಹಾಗೂ ಮಾಹಿತಿಯನ್ನು ತಿಳಿದುಕೊಳ್ಳಲು ಇಲಾಖೆಯ ಅಧಿಕೃತ ವೆಬ್‌ಸೈಟ್ www.ksp.gov.in **ಅಥವಾ** www.karnataka.gov.in/hgcd ನ್ನು ನೋಡುವುದು.

59 ವಸ್ತುನಿಷ್ಠ ಪ್ರಶ್ನೆಗಳ ತಪ್ಪು ಉತ್ತರಗಳಿಗೆ ಎಷ್ಟು ಅಂಕಗಳನ್ನು ಕಳೆಯಲಾಗುತ್ತದೆ ?

ಉ: ವಸ್ತುನಿಷ್ಠ ಪ್ರಶ್ನೆಗಳ ತಪ್ಪು ಉತ್ತರಗಳಿಗೆ 0.25 ಅಂಕಗಳನ್ನು ಕಳೆಯಲಾಗುತ್ತದೆ.

60. ಬೋದಕ, ಸಹಾಯಕ ಬೋದಕ, ಸೈನಿಕ್ ಹಾಗೂ ಚಾಲಕರ ವೇತನ ಶ್ರೇಣಿ ಯಾವ್ಯದು?

ಉ: **ಬೋಧಕ : ರೂ,**37900–950–39800–1100–46400–1250–53900–1450–62600–1650–70850

**ಸಹಾಯಕ ಭೋದಕ: ರೂ,**23500–550–24600–600–27000–650–29600–750–32600–850–36000–950–39800–1100–46400–1250–47650

**ಸೈನಿಕ: ರೂ,**21400–500–22400–550–24600–600–27000–650–29600–750–32600–850–36000–950–39800–1100–42000

**ಚಾಲಕ: ರೂ,**23500–550–24600–600–27000–650–29600–750–32600–850–36000–950–39800–1100–46400–1250–47650

61. ಸಹಿಷ್ಣುತೆ & ದೇಹದಾರ್ಢ್ಯತೆ ಪರೀಕ್ಷೆ ಮತ್ತು ಲಿಖಿತ ಪರೀಕ್ಷೆಗೆ ಹಾಜರಾದಾಗ ಯಾವ ಗುರುತಿನ ಚೀಟಿಯನ್ನು ಹಾಜರು ಪಡಿಸಬೇಕಾಗುತ್ತದೆ ?

ಉ: ಈ ಕೆಳಗಿನ ಯಾವುದಾದರೊಂದು ಭಾವಚಿತ್ರವುಳ್ಳ ಗುರುತಿನ ಚೀಟಿಯನ್ನು ತೋರಿಸಬೇಕು.

i) ಪಾಸ್‌ಪೋರ್ಟ್ (Passport)
ii) ಚಾಲನಾ ಪರವಾನಗಿ ಪತ್ರ (Driving License)
iii) ಪಾನ್ ಕಾರ್ಡ್ (PAN Card)
iv) ರಾಜ್ಯ ಸರ್ಕಾರ/ ಕೇಂದ್ರ ಸರ್ಕಾರ / ಸಾರ್ವಜನಿಕ ಸ್ವಾಮ್ಯದ ಅಥವಾ ಸರ್ಕಾರದ ಅಧೀನಕ್ಕೊಳಪಟ್ಟ ಖಾಸಗಿ ಕಂಪನಿಗಳು ವಿತರಿಸಿರುವ ಭಾವಚಿತ್ರವಿರುವ ಸೇವಾ ಗುರುತಿನ ಚೀಟಿ (Service ID Card)
v) ಸಾರ್ವಜನಿಕ ಬ್ಯಾಂಕುಗಳು / ಅಂಚೆ ಕಛೇರಿಗಳು ವಿತರಿಸಿರುವ ಭಾವಚಿತ್ರವಿರುವ ಪಾಸ್ ಪುಸ್ತಕ (Pass Book with Photograph)
vi) ಭಾವಚಿತ್ರ ಸಮೇತ ನೋಂದಣಿಯಾಗಿರುವ ಸ್ವತ್ತಿನ ದಾಖಲೆ ಪತ್ರ ಅಥವಾ ಪಟ್ಟಾ ಪುಸ್ತಕ (Pattas and registered deeds with Photograph)
vii) ಭಾವಚಿತ್ರ ಸಮೇತ ಸಂಬಂಧಪಟ್ಟ ಪ್ರಾಧಿಕಾರಿಯವರು ವಿತರಿಸಿರುವ ಜಾತಿ ಪ್ರಮಾಣ ಪತ್ರ (Caste Certificate with Photo)
viii) ಮಾಜಿ ಸೈನಿಕ ಅಭ್ಯರ್ಥಿಗಳಿಗೆ ವಿತರಿಸಿರುವ ಪಿಂಚಣಿ ಪುಸ್ತಕ / ಪಿಂಚಣಿ ಮಂಜೂರಾತಿ ಆಗಿರುವ ಆದೇಶ (Ex-servicemen’s pension book/pension payment order)
ix) ಎನ್.ಆರ್.ಇ.ಜಿ.ಎಸ್.ಯಿಂದ ನೀಡಿದ ಭಾವಚಿತ್ರವಿರುವ ಉದ್ಯೋಗ ಚೀಟಿ. (Job cards with Photograph)

x) ಎಲೆಕ್ಟೋರಲ್ ಫೋಟೋ ಗುರುತಿನ ಚೀಟಿ (EPIC).

62. ಸಹಿಷ್ಣುತೆ & ದೇಹದಾರ್ಢ್ಯತೆ ಪರೀಕ್ಷಾ ಸಮಯದಲ್ಲಿ ಅಭ್ಯರ್ಥಿಗೆ ಶಾರೀರಿಕವಾಗಿ ಅನಾಹುತ ಸಂಭವಿಸಿದ ಪಕ್ಷದಲ್ಲಿ ನೇಮಕಾತಿ ಸಮಿಯು ಹೊಣೆಯಾಗಿಯೇ?

ಉ: ಸಹಿಷ್ಣುತೆ & ದೇಹದಾರ್ಢ್ಯತೆ ಪರೀಕ್ಷೆಗೆ ಹಾಜರಾಗುವ ಮುನ್ನ ಅಭ್ಯರ್ಥಿಗಳು ದೈಹಿಕವಾಗಿ ಸದೃಢರಿರಬೇಕು. ಸಹಿಷ್ಣುತೆ & ದೇಹದಾರ್ಢ್ಯತೆ ಪರೀಕ್ಷೆಯ ಸಂದರ್ಭದಲ್ಲಿ ಸಂಭವಿಸುವ ಯಾವುದೇ ರೀತಿಯ ಅನಾಹುತ/ ತೊಂದರೆಗಳಿಗೆ ಪೊಲೀಸ್ ಇಲಾಖೆ/ ಗೃಹ ರಕ್ಷಕ ಹಾಗೂ ಪೌರರಕ್ಷಣಾ ಇಲಾಖಾ ನೇಮಕಾತಿ ಸಮಿತಿಯು ಜವಾಬ್ದಾರರಾಗಿರುವುದಿಲ್ಲ. ಅಭ್ಯರ್ಥಿಗಳು ಅವರ ಸ್ವಂತ ಹಿತದೃಷ್ಟಿಯಿಂದ ಅವರ ದೇಹದ ವೈದ್ಯಕೀಯ ಪರೀಕ್ಷೆಯನ್ನು ಮಾಡಿಸಿಕೊಂಡು, ಅಭ್ಯರ್ಥಿಯ ಆರೋಗ್ಯವು ಎಲ್ಲ ರೀತಿಯಿಂದಲೂ ಸದೃಢವಾಗಿದೆ ಎಂದು ಖಚಿತ ಪಡಿಸಿಕೊಂಡು ಇಲಾಖೆ ನಡೆಸುವ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಎಲ್ಲ ವಿಧದಿಂದಲೂ ಅರ್ಹನೆಂದು ಮುಂಚಿತವಾಗಿಯೇ ತಿಳಿದುಕೊಂಡು ಹಾಜರಾಗತಕ್ಕದ್ದು. ಈ ದಿಸೆಯಲ್ಲಿ ಕನಿಷ್ಠ ಒಂದು ತಿಂಗಳ ಮುಂಚೆಯಿಂದಲೇ ಸಹಿಷ್ಣುತೆ & ದೇಹದಾರ್ಢ್ಯತೆ ಪರೀಕ್ಷೆಗೆ ಅಭ್ಯರ್ಥಿಗಳು ಸಾಕಷ್ಟು ಅಭ್ಯಾಸ ಮಾಡಿಕೊಳ್ಳತಕ್ಕದ್ದು.

63. ಶುಲ್ಕವನ್ನು ಯಾವ ವಿಧಾನದಲ್ಲಿ ಪಾವತಿಸಬೇಕು ?

ಉ: ಶುಲ್ಕವನ್ನು ನಗದು ರೂಪದಲ್ಲಿ ಪೋಸ್ಟ್ ಆಫೀಸ್ / ಹೆಚ್.ಡಿ.ಎಫ್.ಸಿ. ಬ್ಯಾಂಕ್‌ನಲ್ಲಿ ಮಾತ್ರ ಪಾವತಿಸತಕ್ಕದ್ದು. ಡಿಡಿ, ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ.

64. ವಿಳಾಸದಲ್ಲಿ ಬದಲಾವಣೆ ಇದ್ದಲ್ಲಿ ಅದನ್ನು ಬದಲಾಯಿಸಬಹುದೇ ?

ಉ: ಇದಕ್ಕೆ ಸಂಬಂಧಿಸಿದಂತೆ ಮಾಹಿತಿ ಸೂಚಿಯ ಕ್ರ.ಸಂ.12 (ಜೆ) ಯನ್ನು ನೋಡುವುದು.

65. ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಯಾವ ಪ್ರಮಾಣ ಪತ್ರವನ್ನು ಸಲ್ಲಿಸಬೇಕು?

ಉ: ಅಭ್ಯರ್ಥಿಯು ಅರ್ಜಿ ಹಾಕುವ ಸಮಯದಲ್ಲಿ ಯಾವುದೇ ಕೇಂದ್ರ / ರಾಜ್ಯ ಸರ್ಕಾರದ ಅಥವಾ ಸರ್ಕಾರದ ಯಾವುದೇ ಪ್ರಾಧಿಕಾರ ಅಥವಾ ಕೇಂದ್ರ ಅಥವಾ ರಾಜ್ಯ ಸಾರ್ವಜನಿಕ ಸ್ವಾಮ್ಯಗಳಲ್ಲಿ ನೌಕರಿಯಲ್ಲಿದ್ದಲ್ಲಿ ಅಂತಹವರು ಇಲಾಖಾ ಮುಖ್ಯಸ್ಥರ ಅಥವಾ ನೇಮಕಾತಿ ಪ್ರಾಧಿಕಾರದಿಂದ ಸೂಕ್ತ ದೃಢೀಕರಣದ ಸಹಿಯೊಂದಿಗೆ ಸಮುಚಿತ ಮಾರ್ಗದಲ್ಲಿ ಅರ್ಜಿಯನ್ನು ಸಲ್ಲಿಸಿ, ಅನುಮತಿ ಪತ್ರ / ನಿರಾಪೇಕ್ಷಣ ಪ್ರಮಾಣ ಪತ್ರವನ್ನು (No Objection Certificate) ಪಡೆದಿಟ್ಟುಕೊಂಡಿದ್ದು, ನೇಮಕಾತಿ ಸಮಿತಿಯು ಸೂಚಿಸಿದಾಗ ಹಾಜರುಪಡಿಸತಕ್ಕದ್ದು.

66. ಭೋಧಕ/ಸಹಾಯಕ ಭೋಧಕ/ಸೈನಿಕ ಹುದ್ದೆಗೆ ಯಾರನ್ನು ಅನರ್ಹರೆಂದು ಪರಿಗಣಿಸುತ್ತೀರಿ?

ಉ: 1. ಅರ್ಜಿ ಸಲ್ಲಿಸಲು ನಿಗದಿ ಪಡಿಸಿದ ಕೊನೆಯ ದಿನಾಂಕದಂದು ನಿಗದಿತ ವಿದ್ಯಾರ್ಹತೆ ಪಡೆಯಲು ಪರೀಕ್ಷೆ ಬರೆದು ಫಲಿತಾಂಶಕ್ಕಾಗಿ ಕಾಯುತ್ತಿರುವ ಅಭ್ಯರ್ಥಿಗಳು ಅರ್ಹರಾಗಿರುವುದಿಲ್ಲ.

2; ಭೂಸೇನೆ, ನೌಕಾಸೇನೆ ಮತ್ತು ವಾಯುಸೇನೆಯಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿಯನ್ನು ಹೊರತು ಪಡಿಸಿ, ಡಿಫೆನ್ಸ್ ಸೆಕ್ಯುರಿಟಿ ಕೋರ್, ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್, ಲೋಕ್ ಸಹಾಯಕ್ ಸೇನಾ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ ಮತ್ತು
ಅಂತಹ ಸೇನೆಯಿಂದ ನಿವೃತ್ತಿ ವೇತನ ಪಡೆಯುತ್ತಿರುವ ಅಥವಾ ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಲ್ಲಿ ಬಿಡುಗಡೆಯಾದವನು. ಅಥವಾ ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ ಅಥವಾ ತನ್ನ ಸ್ವಂತ ಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದುಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು.

ಎ. ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರರು.
ಬಿ. ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯ ಹೊಂದಿ ಬಿಡುಗಡೆಯಾದ ವ್ಯಕ್ತಿ.
ಸಿ. ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು ಹಾಗೂ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ರಾಜ್ಯ ನಾಗರೀಕ ಸೇವೆ ಅಥವಾ ಹುದ್ದೆಗಳಿಗೆ ನೇಮಕ ಹೊಂದುವಂತಿಲ್ಲ.
3; ಕರ್ನಾಟಕ ರಾಜ್ಯದ, ಕೇಂದ್ರ ಸರ್ಕಾರದ ಯಾವುದೇ ಸರ್ಕಾರಿ ಹಾಗೂ ಅರೆ ಸರ್ಕಾರಿ ಸಂಸ್ಥೆಯ ಸೇವೆಯಿಂದ ವಜಾಗೊಂಡಿರುವ ನೌಕರರು ನೇಮಕಾತಿಗೆ ಅರ್ಹರಲ್ಲ.

67. ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಾಗ ಯಾವ ಪ್ರಮಾಣ ಪತ್ರಗಳನ್ನು ಸಲ್ಲಿಸಬೇಕಾಗಿರುತ್ತದೆ.?

ಉ: ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಾಗ ಯಾವುದೇ ಮೂಲ ಪ್ರಮಾಣ ಪತ್ರಗಳನ್ನು ಸಲ್ಲಿಸಬೇಕಾಗಿರುವುದಿಲ್ಲ, ಆದರೆ ಪ್ರಮಾಣ ಪತ್ರದ ಮಾಹಿತಿ ಮತ್ತು ಪ್ರಮಾಣ ಪತ್ರ ಪಡೆದ ದಿನಾಂಕ ನಮೂದಿಸಬೇಕಾಗಿರುತ್ತದೆ. ತದನಂತರ, ಅರ್ಹ ಅಭ್ಯರ್ಥಿಗಳು ಮೂಲ ದಾಖಲೆಗಳ ಪರಿಶೀಲನಾ ಸಂದರ್ಭದಲ್ಲಿ ಅರ್ಜಿಯಲ್ಲಿ ನಮೂದಿಸಿರುವ ಎಲ್ಲಾ ಮಾಹಿತಿಗಳಿಗೆ ಪೂರಕವಾಗಿ ಸದರಿ ದಾಖಲೆ / ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸಬೇಕು ಹಾಗು ಅರ್ಜಿಸಲ್ಲಿಸಲು ನಿಗದಿ ಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿರಬೇಕು. ತಪ್ಪಿದಲ್ಲಿ ಅಂತಹ ಮೀಸಲಾತಿಯನ್ನು ರದ್ದುಪಡಿಸಲಾಗುವುದು. ಒಂದುವೇಳೆ, ಸಲ್ಲಿಸಿದ ಪ್ರಮಾಣ ಪತ್ರಗಳು ಕಳೆದು ಹೋದರೆ ನೇಮಕಾತಿ ಸಮಿತಿಯು ಜವಾಬ್ದಾರಿಯಾಗುವುದಿಲ್ಲ.

68. ಅಭ್ಯರ್ಥಿಗಳು ನೇಮಕಾತಿಯ ಯಾವುದೇ ನಿಯಮಗಳನ್ನು ಪ್ರಶ್ನಿಸಬಹುದೇ?

ಉ: ಅಭ್ಯರ್ಥಿಯು ಹುದ್ದೆಗೆ ಅರ್ಜಿ ಸಲ್ಲಿಸಿದ ತಕ್ಷಣ ತಾನು ನಿಯಮ ಮತ್ತು ವಿನಿಯಮಗಳಿಗೆ ಬದ್ಧನಾಗಿರುತ್ತಾನೆ ಎಂದು ಭಾವಿಸಲಾಗಿರುತ್ತದೆ. ಒಂದುವೇಳೆ, ತಾನು ಸದರಿ ಹುದ್ದೆಗೆ ಆಯ್ಕೆಯಾಗದಿದ್ದ ಪಕ್ಷದಲ್ಲಿ ನಿಯಮಗಳನ್ನು ಪ್ರಶ್ನಿಸಲು ಬರುವುದಿಲ್ಲ.

69. ಪರೀಕ್ಷೆ ಮುಗಿದ ನಂತರ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವ ತಾತ್ಕಾಲಿಕ ಕೀ ಉತ್ತರವನ್ನು ಪ್ರಶ್ನಿಸಬಹುದೇ?

ಉ: ಪರೀಕ್ಷೆ ಮುಗಿದ ಒಂದು ಅಥವಾ ಎರಡು ದಿನಗಳ ನಂತರ Provisional Answer Key ವೆಬ್‌ಸೈಟ್‌ನಲ್ಲಿ ಹಾಗೂ ಸಂಬಂಧಪಟ್ಟ ಘಟಕಗಳಲ್ಲಿ ಪ್ರಕಟಿಸಲಾಗುವುದು. ಅಭ್ಯರ್ಥಿಗಳು, ಉತ್ತರಗಳ ಬಗ್ಗೆ ಏನಾದರೂ ಆಕ್ಷೇಪಣೆಗಳು ಇದ್ದಲ್ಲಿ ಅದಕ್ಕೆ ಒಂದು ವಾರದ ಕಾಲಾವಕಾಶವನ್ನು ನೀಡಲಾಗುವುದು. ಆಕ್ಷೇಪಣೆಗಳು ಬಂದ ನಂತರ ಅದನ್ನು ಒಂದು ನುರಿತ ತಜ್ಞರ ಸಮಿತಿಗೆ ನೀಡಿ ಅವರಿಂದ ಸರಿಯಾದ ಉತ್ತರಗಳನ್ನು ಪಡೆದು Final Answer Key ಯನ್ನು ಪ್ರಕಟಿಸಲಾಗುವುದು ಮತ್ತು ಈ ಅಂತಿಮ ಉತ್ತರ ಕೀಗಳ ಪ್ರಕಾರ ಒ.ಎಂ.ಆರ್. ಉತ್ತರ ಪತ್ರಿಕೆಯನ್ನು ಮೌಲ್ಯಮಾಪನ ಮಾಡಲಾಗುವುದು.

70. ಅಭ್ಯರ್ಥಿಗಳಿಗೆ ಪತ್ರ ವ್ಯವಹಾರಕ್ಕೆ ಅವಕಾಶವಿರುವುದೇ?

ಉ: ಅಭ್ಯರ್ಥಿಯು ಅಂತರ್‌ಜಾಲದಲ್ಲಿ ಅರ್ಜಿಯನ್ನು ತುಂಬುವಾಗ ನೀಡಿರುವ ಮಾಹಿತಿಗಳ ಅನ್ವಯ ಸಮರ್ಪಕವಾಗಿ ಭರ್ತಿ ಮಾಡದೆ Junk Character /Unknown language ತುಂಬಿದ ಅರ್ಜಿಗಳು ತಿರಸ್ಕೃತವಾದಲ್ಲಿ ತತ್ಸಂಬಂಧ ಯಾವುದೇ ರೀತಿಯ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.

71. ಹೈದರಾಬಾದ್-ಕರ್ನಾಟಕ ಪ್ರದೇಶದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದೇ?

ಉ: ಹೈದರಾಬಾದ್-ಕರ್ನಾಟಕ ಪ್ರದೇಶದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿರುತ್ತದೆ.

72). ಹೈದರಾಬಾದ್-ಕರ್ನಾಟಕ ಪ್ರದೇಶದಲ್ಲಿನ ಅಭ್ಯರ್ಥಿಗಳಿಗೆ ವಯೋಮಿತಿಯಲ್ಲಿ ಸಡಿಲಿಕೆ ಇದೆಯೇ?

ಉ: ಹೈದರಾಬಾದ್-ಕರ್ನಾಟಕ ಪ್ರದೇಶದಲ್ಲಿನ ಅಭ್ಯರ್ಥಿಗಳಿಗೆ ವಯೋಮಿತಿಯಲ್ಲಿ ಯಾವುದೇ ಸಡಿಲಿಕೆ ಇರುವುದಿಲ್ಲ.

92) ಹೈದರಾಬಾದ್-ಕರ್ನಾಟಕ ಪ್ರದೇಶದಲ್ಲಿನ ಅಭ್ಯರ್ಥಿಗಳು ಹೈದರಾಬಾದ್-ಕರ್ನಾಟಕ ಪ್ರದೇಶದ ಮೀಸಲಾತಿಯನ್ನು ಕೋರಲು ಸಲ್ಲಿಸಬೇಕಾದ ಪ್ರಮಾಣ ಪತ್ರವನ್ನು ಪಡೆಯಲು ಅವಶ್ಯಕವಾದ ಪ್ರಮಾಣ ಪತ್ರಗಳಾವುವು?

ಉ: ಒಬ್ಬ ಅಭ್ಯರ್ಥಿಯು ತಾನು ಸ್ಥಳೀಯ ವ್ಯಕ್ತಿಯೆಂದು ಮಾಡಿದ ಕ್ಲೇಮನ್ನು ರುಜುವಾತುಪಡಿಸಲು ಅರ್ಹತಾ ಪ್ರಮಾಣ ಪತ್ರವನ್ನು ನೀಡಲು ಈ ಕೆಳಗಿನ ಪ್ರಮಾಣ ಪತ್ರಗಳನ್ನು ಆಧಾರವಾಗಿಟ್ಟುಕೊಳ್ಳಬಹುದು:

ಎ) ಜನನ ಪ್ರಮಾಣ ಪತ್ರ, ಅಥವಾ

ಬಿ) ವಾಸಸ್ಥಳ ಪ್ರಮಾಣ ಪತ್ರ, ಅಥವಾ

ಸಿ) ವ್ಯಾಸಂಗ ಪ್ರಮಾಣ ಪತ್ರ, ಅಥವಾ

ಡಿ) ವಿವಾಹ ಪ್ರಮಾಣ ಪತ್ರ, ಅಥವಾ

ಇ) ಸ್ವಗ್ರಾಮ (ಅಥವಾ ಸ್ಥಳ) ಪ್ರಮಾಣ ಪತ್ರ, ಅಥವಾ

ಎಫ್) ವಾರಸ ಪ್ರಮಾಣ ಪತ್ರ ಅಥವಾ

ಜಿ) ಈ ಮೇಲಿನ ಪ್ರಮಾಣ ಪತ್ರಗಳ ಒಂದು ಅಥವಾ ಹೆಚ್ಚಿನ ಸಂಯೋಜನೆ

ಅಭ್ಯರ್ಥಿಯು ಮೇಲ್ಕಂಡಂತೆ ತಿಳಿಸಲಾದ ಪ್ರಮಾಣ ಪತ್ರಗಳಲ್ಲಿ ಯಾವುದೇ ಒಂದು ಪ್ರಮಾಣ ಪತ್ರವನ್ನು ಅಥವಾ ಹೆಚ್ಚಿನವುಗಳನ್ನು ಉಪ ವಿಭಾಗಧಿಕಾರಿಗೆ ಸಲ್ಲಿಸತಕ್ಕದ್ದು. ಅವರು ಯುಕ್ತ ಪರಿಶೀಲನೆ ಮತ್ತು ಸಂಕ್ಷಿಪ್ತ ವಿಚಾರಣೆಯನ್ನು ನಡೆಸಿದ ತರುವಾಯ, ಅನುಬಂಧ-'ಎ' ಯಲ್ಲಿರುವಂತ ನಮೂನೆಯಲ್ಲಿ ಅರ್ಹತಾ ಪ್ರಮಾಣ ಪತ್ರವನ್ನು ನೀಡುತ್ತಾರೆ. ಇನ್ನೂ ಹೆಚ್ಚಿನ ವಿವರಗಳಿಗಾಗಿ ಅಧಿಸೂಚನೆಯನ್ನು ಗಮನಿಸತಕ್ಕದ್ದು.

- **ಹೈದರಾಬಾದ್-ಕರ್ನಾಟಕ ಪ್ರದೇಶಕ್ಕೊಳಪಡುವ (ಸ್ಥಳೀಯ) ಅಭ್ಯರ್ಥಿಗಳು ಹೈ-ಕ ಮೀಸಲಾತಿಯ ಸಲುವಾಗಿ ಪಡೆಯಬೇಕಾಗಿರುವ ಪ್ರಮಾಣ ಪತ್ರ:**

**ನೇರ ನೇಮಕಾತಿಯಲ್ಲಿ ಸ್ಥಳೀಯ ವ್ಯಕ್ತಿಯೆಂಬ ಮೀಸಲಾತಿಯನ್ನು ಕ್ಲೇಮು ಮಾಡುವ ಅರ್ಜಿದಾರರು ಒಂದು ಸ್ವಯಂ ಘೋಷಿತ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು. ಪರಂತು ಅರ್ಜಿ ಸಲ್ಲಿಸುವ ದಿನಾಂಕದಂದು ಅರ್ಜಿದಾರರು ಸ್ಥಳೀಯ ವ್ಯಕ್ತಿಯೆಂದು ಅರ್ಹತೆ ಪಡೆಯುವುದು ಕಡ್ಡಾಯವಾಗಿರುತ್ತದೆ. ತಾತ್ಕಾಲಿಕವಾಗಿ ಆಯ್ಕೆಗೊಂಡ ಅಭ್ಯರ್ಥಿಗಳು ದಾಖಲಾತಿ ಪರೀಕ್ಷೆಗಳ ಸಮಯದಲ್ಲಿ ಸಕ್ಷಮ ಪ್ರಾಧಿಕಾರದಿಂದ ನೀಡಲಾದ ಅರ್ಹತಾ ಪ್ರಮಾಣ ಪತ್ರ (ಅನುಬಂಧ-ಎ) ನೀಡತಕ್ಕದ್ದು. ಅರ್ಹತಾ ಪ್ರಮಾಣ ಪತ್ರದಲ್ಲಿ ಸಕ್ಷಮ ಪ್ರಾಧಿಕಾರಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಲಾದ ಅಂತಿಮ ದಿನಾಂಕದಂದು ಅಭ್ಯರ್ಥಿಯು ಸಾರ್ವಜನಿಕ ಉದ್ಯೋಗ ಆದೇಶದಂತೆ ಸ್ಥಳೀಯ ವ್ಯಕ್ತಿಯೆಂದು ಅರ್ಹತೆ ಪಡೆದಿರುತ್ತಾನೆಂದು ಒಂದು ಅಡಿ ಟಿಪ್ಪಣಿಯನ್ನು ದಾಖಲಿಸುವುದು.**

<u>ವಿಶೇಷ ಸೂಚನೆ :-</u>

1) ನಿಗದಿ ಪಡಿಸಿರುವ ನಮೂನೆಯ ಜಾತಿ/ಪ್ರವರ್ಗ ಪ್ರಮಾಣ ಪತ್ರಗಳು ಸಂಬಂಧಪಟ್ಟ ತಹಶೀಲ್ದಾರ್‌ರವರಿಂದ ಮತ್ತು ಯೋಜನಾ ನಿರಾಶ್ರಿತ ಪ್ರಮಾಣ ಪತ್ರ, ಕನ್ನಡ ಮಾಧ್ಯಮ ಪ್ರಮಾಣ ಪತ್ರ, ಗ್ರಾಮೀಣ ಪ್ರಮಾಣ ಪತ್ರ ಮತ್ತು ಮಾಜಿ ಸೈನಿಕನ ವಿಯೋಜನೆ ಪ್ರಮಾಣ ಪತ್ರ (ಪೂರ್ವಾನುಮತಿ)ಗಳನ್ನು ಅರ್ಜಿ ಸಲ್ಲಿಸಲು ನಿಗದಿ ಪಡಿಸಿರುವ ಕೊನೆಯ 15/02/2019 ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು.

2) ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳಿಗೆ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆ, ಲಿಖಿತ ಪರೀಕ್ಷೆ ಮತ್ತು ವೈದ್ಯಕೀಯ ಪರೀಕ್ಷೆ ನಡೆಯುವುದರ ಬಗ್ಗೆ ಅರ್ಹಗೊಂಡ ಅಭ್ಯರ್ಥಿಗಳಿಗೆ ಯಾವುದೇ ಪತ್ರ ವ್ಯವಹಾರವನ್ನು ಮಾಡಲಾಗುವುದಿಲ್ಲ ಮತ್ತು ಅಭ್ಯರ್ಥಿಗಳು ಪೊಲೀಸ್ ಇಲಾಖೆಯ ಅಧಿಕೃತ ವೆಬ್‌ಸೈಟ್‌ನ ಮುಖಾಂತರ ಪಡೆಯಬಹುದಾಗಿದೆ.

೩) ಇನ್ನೂ ಹೆಚ್ಚಿನ ಮಾಹಿತಿ ಬೇಕಿದ್ದಲ್ಲಿ ನೇಮಕಾತಿ ಕಛೇರಿಯ ಈ ಕೆಳಕಂಡ ಸಹಾಯವಾಣಿಯ ಸಂಖ್ಯೆ ಮತ್ತು ಇಮೇಲ್ ನಿಂದ ಪಡೆಯಬಹುದಾಗಿರುತ್ತದೆ ಹಾಗೂ ಅರ್ಜಿ ತುಂಬುವ ವಿಧಾನ ಪೊಲೀಸ್ ಇಲಾಖೆಯ ಅಧಿಕೃತ ವೆಬ್‌ಸೈಟ್ **www.ksp.gov.in** ನಲ್ಲಿನ ಮಾಹಿತಿ ಸೂಚಿಯಲ್ಲಿ ಲಭ್ಯವಿರುತ್ತದೆ.

ಸಹಾಯವಾಣಿ ಸಂಖ್ಯೆ : **080-22943346.**